ಸಂಪುಟ : 11 ಸಂಚಿಕೆ: 123 ಪುಟ : 4+2 ಬೆಲೆ: 3.00 ಮಂಗಳವಾರ ಜೂನ್ 16 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 123 Pages : 4+2 Price : 3.00 Tuesday june 16 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

**ಉತ್ತರ ಕರ್ನಾಟಕದ ಧ್ವನಿಗೆ ಮನ್ನಣೆ ನೀಡಿ; ಸರ್ಕಾರಕ್ಕೆ ಡಾ. ಶಿವಕುಮಾರ ಸ್ವಾಮೀಜಿ ಒತ್ತಾಯ**

## ಜಿ.ಎಸ್. ಪಾಟೀಲರನ್ನು ಸಂಪುಟಕ್ಕೆ ಸೇರಿಸಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ರೋಣ ಕ್ಷೇತ್ರದ ಹಿರಿಯ ಶಾಸಕ ಹಾಗೂ ಕಾಂಗ್ರೆಸ್ ಪಕ್ಷದ ಪ್ರಭಾವಿ ಮುಖಂಡ ಜಿ.ಎಸ್. ಪಾಟೀಲ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂದು ಸಿದ್ಧನಕೊಳ್ಳ ಮಠದ ಡಾ. ಶಿವಕುಮಾರ ಸ್ವಾಮೀಜಿ ಆಗ್ರಹಿಸಿದರು.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಉತ್ತರ ಕರ್ನಾಟಕ ಭಾಗ-ಕ್ಕೆ ಸಚಿವ ಸಂಪುಟದಲ್ಲಿ ನಿರಂತರವಾಗಿ ಅನ್ಯಾಯವಾಗುತ್ತಿದ್ದು, ಈ ಬಾರಿ ಆ ಭಾಗದ ಸಮರ್ಥ ನಾಯಕರಿಗೆ ನ್ಯಾಯ ದೊರೆಯಬೇಕು ಎಂದು ಒತ್ತಾಯಿಸಿದರು.

ಜನಪರ ಹೋರಾಟಗಳು, ಸಂಘಟನಾ ಸಾಮರ್ಥ್ಯ ಹಾಗೂ ಆಡಳಿತಾತ್ಮಕ ಅನುಭವ ಹೊಂದಿರುವ ಜಿ.ಎಸ್. ಪಾಟೀಲ ಅವರು ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದು, ಕ್ಷೇತ್ರದ ಅಭಿವೃದ್ಧಿ ಹಾಗೂ ಜನಸೇವೆಯಲ್ಲಿ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಅವರಂತಹ ಅನುಭವಿ ನಾಯಕನನ್ನು ಸಚಿವ ಸಂಪುಟದಿಂದ ದೂರವಿಡುವುದು ಸಮಂಜಸವಲ್ಲ. ಕಾಂಗ್ರೆಸ್ ಪಕ್ಷವನ್ನು ಗದಗ ಜಿಲ್ಲೆಯಲ್ಲಿ ಬಲಿಷ್ಠವಾಗಿ ಸಂಘಟಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದು, ಹಿಂದುಳಿದ ವರ್ಗಗಳು, ಬಡವರು ಹಾಗೂ ದಲಿತರ ಪರ ಸದಾ ಧ್ವನಿಯಾಗಿದ್ದಾರೆ ಎಂದು ಶ್ಲಾಘಿಸಿದರು.

ಸರ್ಕಾರ ಸಾಮಾಜಿಕ ನ್ಯಾಯ ಹಾಗೂ ಪ್ರಾದೇಶಿಕ ಸಮತೋಲನಕ್ಕೆ ಬದ್ಧವಾಗಿದ್ದರೆ, ಉತ್ತರ ಕರ್ನಾಟಕದ ಪ್ರಬಲ ಪ್ರತಿನಿಧಿಯಾಗಿ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ತನ್ನ ಬದ್ಧತೆಯನ್ನು ಸಾಬೀತುಪಡಿಸಬೇಕು ಎಂದು ಸ್ವಾಮೀಜಿ ಒತ್ತಾಯಿಸಿದರು.

ಅಲ್ಲದೆ, ಜಿ.ಎಸ್. ಪಾಟೀಲ ಅವರನ್ನು ಸಚಿವ ಸಂಪುಟಕ್ಕೆ ಸೇರಿಸದಿದ್ದರೆ ಉತ್ತರ ಕರ್ನಾಟಕದ ಜನರ ಭಾವನೆಗಳಿಗೆ ಧಕ್ಕೆಯಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

> "ಶಾಸಕ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡುವುದು ಕೇವಲ ಒಬ್ಬ ವ್ಯಕ್ತಿಗೆ ಸಿಗುವ ಗೌರವವಲ್ಲ, ಅದು ಉತ್ತರ ಕರ್ನಾಟಕದ ಜನರಿಗೆ ದೊರೆಯುವ ನ್ಯಾಯವಾಗಿದೆ."
> – **ಡಾ. ಶಿವಕುಮಾರ ಸ್ವಾಮೀಜಿ**

**ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಲಾಭ ಸಕಾಲದಲ್ಲಿ ತಲುಪಿಸಿ: ಅಶೋಕ ಮಂದಾಲಿ**

# ಗ್ಯಾರಂಟಿ ಸೌಲಭ್ಯದಲ್ಲಿ ವಿಳಂಬ ಸಹಿಸುವುದಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚಗ್ಯಾರಂಟಿ ಯೋಜನೆಗಳು ಬಡವರು ಹಾಗೂ ದುರ್ಬಲ ವರ್ಗಗಳ ಆರ್ಥಿಕ ಸಬಲೀಕರಣಕ್ಕಾಗಿ ರೂಪುಗೊಂಡಿದ್ದು, ಈ ಯೋಜನೆಗಳ ಸಮರ್ಪಕ ಅನುಷ್ಠಾನವು ಜನಸೇವೆ ಮಾಡಲು ದೊರೆತಿರುವ ಬಹುದೊಡ್ಡ ಅವಕಾಶವಾಗಿದೆ ಎಂದು ಗದಗ ತಾಲೂಕು ಮಟ್ಟದ ಪಂಚಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ನಡೆದ ತಾಲೂಕು ಮಟ್ಟದ ಪಂಚಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಡವರಿಗೆ ಯೋಜನೆಗಳ ಸೌಲಭ್ಯ ತಲುಪಿಸುವಲ್ಲಿ ಯಾವುದೇ ವಿಳಂಬ ಆಗಬಾರದು. ಶೇ.100ರಷ್ಟು ಗುರಿ ಸಾಧಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಗೃಹಲಕ್ಷ್ಮೀ ಯೋಜನೆಯಡಿ ಅರ್ಹ ಫಲಾನುಭವಿಗಳು ವಂಚಿತರಾಗದಂತೆ ನೋಡಿಕೊಳ್ಳಬೇಕು. ಅಲ್ಲದೆ ಮರಣ ಹೊಂದಿದವರ ಖಾತೆಗಳಿಗೆ ಹಣ ಜಮೆಯಾಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಂಗನವಾಡಿ ಕಾರ್ಯಕರ್ತೆಯರು ಮನೆಮನೆಗೆ



> "ಗ್ಯಾರಂಟಿ ಯೋಜನೆಗಳ ಸೌಲಭ್ಯ ತಲುಪಿಸುವುದು ಕೇವಲ ಆಡಳಿತಾತ್ಮಕ ಕೆಲಸವಲ್ಲ; ಅದು ಬಡವರ ಬದುಕು ಕಟ್ಟುವ ಸಾಮಾಜಿಕ ಜವಾಬ್ದಾರಿಯಾಗಿದೆ."
> – ಅಶೋಕ ಮಂದಾಲಿ

ತೆರಳಿ ಫಲಾನುಭವಿಗಳ ಹಾಗೂ ಮರಣ ಹೊಂದಿದವರ ಮಾಹಿತಿಯನ್ನು ಸಂಗ್ರಹಿಸಬೇಕು. ಈ ಮಾಹಿತಿಯನ್ನು ಬ್ಯಾಂಕ್‌ಗಳಿಗೆ ಸಲ್ಲಿಸುವ ಮೂಲಕ ಅನರ್ಹರಿಗೆ ಹಣ ಜಮೆಯಾಗುವುದನ್ನು ತಡೆಯಬೇಕು ಎಂದು ತಿಳಿಸಿದರು.

ಹೆಸ್ಕಾಂ ಸಿಬ್ಬಂದಿ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ವಿದ್ಯುತ್ ಪೂರೈಕೆ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ನೀಡಬೇಕು. ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆ, ಶುದ್ಧ ಕುಡಿಯುವ ನೀರು, ಆಸನ ವ್ಯವಸ್ಥೆ ಹಾಗೂ ಶೌಚಾಲಯಗಳ ನಿರ್ವಹಣೆಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಹೇಳಿದರು.

ತಾಲೂಕು ಮಟ್ಟದ ಪಂಚಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ ಕೃಷ್ಣಗೌಡ ಎಚ್. ಪಾಟೀಲ ಮಾತನಾಡಿ, ಯುವನಿಧಿ ಯೋಜನೆಯ ಮಾಹಿತಿ ಪ್ರತಿಯೊಂದು ಗ್ರಾಮ ಪಂಚಾಯಿತಿ ಹಾಗೂ ಕಾಲೇಜು ಮಟ್ಟಕ್ಕೆ ತಲುಪಬೇಕು. ಅರ್ಹ ನಿರುದ್ಯೋಗಿ ಯುವಕರು ಯಾವುದೇ ಕಾರಣಕ್ಕೂ ಯೋಜನೆಯಿಂದ ವಂಚಿತರಾಗಬಾರದು ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ನೀಲಮ್ಮ ಬೋಳನವರ, ತಾಲೂಕು ಸಮಿತಿ ಸದಸ್ಯರು, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಡಾ. ಎಚ್.ಎಸ್. ಜಿನಗ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಸಂತೋಷ್ ಎಂ.ವಿ. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

### ಯೋಜನೆಗಳ ಪ್ರಗತಿ ಹೀಗಿದೆ

**ಯುವನಿಧಿ**

2,748 ಅಭ್ಯರ್ಥಿಗಳ ನೋಂದಣಿ

1,188 ಫಲಾನುಭವಿಗಳಿಗೆ ಡಿಬಿಟಿ ಮೂಲಕ ಹಣ ವರ್ಗಾವಣೆ

**ಗೃಹಲಕ್ಷ್ಮೀ**

83,593 ಅರ್ಜಿಗಳ ನೋಂದಣಿ

80,265 ಫಲಾನುಭವಿಗಳಿಗೆ ಹಣ ಜಮೆ

ಶೇ.96.01ರಷ್ಟು ಪ್ರಗತಿ

**ಗೃಹಜ್ಯೋತಿ**

ನಗರ ಪ್ರದೇಶದಲ್ಲಿ ಶೇ.99.48ರಷ್ಟು ನೋಂದಣಿ

ಗ್ರಾಮೀಣ ಭಾಗದಲ್ಲಿ ಶೇ.99.59ರಷ್ಟು ನೋಂದಣಿ

**ಅನ್ನಭಾಗ್ಯ**

ನಗರ ಪ್ರದೇಶದ 32,694 ಪಡಿತರ ಚೀಟಿದಾರರಿಗೆ 11,236 ಕ್ವಿಂಟಲ್ ಅಕ್ಕಿ ವಿತರಣೆ

ಗ್ರಾಮೀಣ ಭಾಗದ 48,534 ಪಡಿತರ ಚೀಟಿದಾರರಿಗೆ 17,890 ಕ್ವಿಂಟಲ್ ಅಕ್ಕಿ ವಿತರಣೆ

**ಶಕ್ತಿ ಯೋಜನೆ**

ಗದಗ ಘಟಕದಲ್ಲಿ ಮಹಿಳಾ ಪ್ರಯಾಣಿಕರಿಂದ ₹100.86 ಕೋಟಿ ಆದಾಯ

ಬೆಟಗೇರಿ ಘಟಕದಲ್ಲಿ ₹59.74 ಕೋಟಿ ಆದಾಯ

**ಪಕ್ಷ ಸಂಘಟನೆಗೆ ಅಪಾರ ಸೇವೆ ಸಲ್ಲಿಸಿರುವ ಜಿ.ಎಸ್. ಪಾಟೀಲರಿಗೆ ಅವಕಾಶ ಕಲ್ಪಿಸಲು ಎಚ್.ಕೆ. ಪಾಟೀಲರು ದೊಡ್ಡ ಮನಸ್ಸು ಮಾಡಬೇಕು: ಈರಣ್ಣ ಶೆಟ್ಟರ್**

# ಜಿ.ಎಸ್.ಗಾಗಿ ಎಚ್.ಕೆ. ತ್ಯಾಗಕ್ಕೆ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕಾಂಗ್ರೆಸ್‌ನಲ್ಲಿ ಸಚಿವ ಸ್ಥಾನದ ಹಂಚಿಕೆ ವಿಚಾರ ಹೊಸ ರಾಜಕೀಯ ಚರ್ಚೆಗೆ ಕಾರಣವಾಗಿದ್ದು, ರೋಣ ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸಂಪುಟದಲ್ಲಿ ಸ್ಥಾನ ಕಲ್ಪಿಸುವ ನಿಟ್ಟಿನಲ್ಲಿ ಸಚಿವ ಎಚ್.ಕೆ. ಪಾಟೀಲರು ತ್ಯಾಗದ ಮನೋಭಾವ ಪ್ರದರ್ಶಿಸಿ ಅವಕಾಶ ಮಾಡಿಕೊಡಬೇಕು ಎಂದು ಕಾಂಗ್ರೆಸ್ ಮುಖಂಡ ಈರಣ್ಣ ಶೆಟ್ಟರ್ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗದಗ ಜಿಲ್ಲೆ ರಾಜ್ಯದಲ್ಲಿಯೇ ಶಿಸ್ತಿನ ಕಾಂಗ್ರೆಸ್ ಜಿಲ್ಲೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಹಿರಿಯ ನಾಯಕರ ಮಾರ್ಗದರ್ಶನದಲ್ಲಿ ಜಿಲ್ಲೆಯ ಕಾಂಗ್ರೆಸ್ ನಾಯಕರು ಸೌಹಾರ್ದಯುತವಾಗಿ ಕಾರ್ಯನಿರ್ವಹಿಸುತ್ತಿದ್ದು, ಪಕ್ಷದ ಆದೇಶಗಳನ್ನು ಚಾಚೂ ತಪ್ಪದೆ ಪಾಲಿಸಿಕೊಂಡು ಬಂದಿದ್ದಾರೆ. ಆದರೆ, ಇತ್ತೀಚಿನ ಸಚಿವ ಸಂಪುಟ ವಿಸ್ತರಣೆ ಹಾಗೂ ಪುನಾರಚನೆಗೆ ಸಂಬಂಧಿಸಿದ ಬೆಳವಣಿಗೆಗಳು ಜಿಲ್ಲೆಯ ಕಾರ್ಯಕರ್ತರಲ್ಲಿ



ಅಸಮಾಧಾನಕ್ಕೆ ಕಾರಣವಾಗಿವೆ ಎಂದು ಹೇಳಿದರು.

ಎಚ್.ಕೆ. ಪಾಟೀಲರು ಈಗಾಗಲೇ ಸಚಿವರಾಗಿ ಕಾರ್ಯನಿರ್ವಹಿಸಿ ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿದ್ದಾರೆ. ಆದರೆ, ಕಳೆದ ನಾಲ್ಕು ದಶಕಗಳಿಂದ ಕಾಂಗ್ರೆಸ್ ಪಕ್ಷದ ಸಂಘಟನೆಗಾಗಿ ನಿರಂತರವಾಗಿ ದುಡಿಯುತ್ತಿರುವ ಜಿ.ಎಸ್. ಪಾಟೀಲರು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸೇರಿದಂತೆ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿ ಪಕ್ಷದ ಬಲವರ್ಧನೆಗೆ ಮಹತ್ವದ ಕೊಡುಗೆ ನೀಡಿದ್ದಾರೆ.

ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಅವರು ಸತತ ಎಂಟು ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಹಿರಿಯ ನಾಯಕರಾಗಿದ್ದಾರೆ ಎಂದು ವಿವರಿಸಿದರು.

ಇಂತಹ ಅನುಭವೀ ನಾಯಕನಿಗೆ ಸಚಿವ ಸ್ಥಾನ ನೀಡುವುದರಿಂದ ಪಕ್ಷದ ಸಂಘಟನೆಗೆ ಹೊಸ ಶಕ್ತಿ ದೊರೆಯಲಿದೆ. ಅಲ್ಲದೆ, ಪಕ್ಷಕ್ಕಾಗಿ ದೀರ್ಘಕಾಲ ಸೇವೆ ಸಲ್ಲಿಸಿದ ನಾಯಕರಿಗೆ ನ್ಯಾಯ ದೊರೆತಂತಾಗುತ್ತದೆ ಎಂದು ಅಭಿಪ್ರಾಯಪಟ್ಟರು.

> "ನಾಲ್ಕು ದಶಕಗಳಿಂದ ಪಕ್ಷ ಕಟ್ಟಿದ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಿದರೆ ಜಿಲ್ಲಾ ಕಾಂಗ್ರೆಸ್ ಇನ್ನಷ್ಟು ಬಲಿಷ್ಠವಾಗಲಿದೆ. ಪಕ್ಷದ ಹಿತದೃಷ್ಟಿಯಿಂದ ಎಚ್.ಕೆ. ಪಾಟೀಲರು ದೊಡ್ಡ ಮನಸ್ಸು ಮಾಡಬೇಕು."
> – **ಈರಣ್ಣ ಶೆಟ್ಟರ್,** ಕಾಂಗ್ರೆಸ್ ಮುಖಂಡ

ಜಿಲ್ಲೆಯಲ್ಲಿ ಸಚಿವ ಸ್ಥಾನಕ್ಕಾಗಿ ನಡೆಯುತ್ತಿರುವ ಪ್ರತಿಭಟನೆಗಳು ಹಾಗೂ ಅಸಮಾಧಾನದ ವಾತಾವರಣ ಮುಂದಿನ ದಿನಗಳಲ್ಲಿ ಪಕ್ಷಕ್ಕೆ ಹಿನ್ನಡೆಯಾಗುವ ಸಾಧ್ಯತೆಯಿದೆ. ಆದ್ದರಿಂದ ಎಚ್.ಕೆ. ಪಾಟೀಲರು ದೊಡ್ಡ ಮನಸ್ಸು ಮಾಡಿ, ತಮ್ಮ ಸಹೋದ್ಯೋಗಿ ಜಿ.ಎಸ್. ಪಾಟೀಲರಿಗೆ ಅವಕಾಶ ಕಲ್ಪಿಸಬೇಕು. ಇದರಿಂದ ಹಿರಿಯ ನಾಯಕರಿಗೆ ಗೌರವ ದೊರೆಯುವುದರ ಜೊತೆಗೆ ಜಿಲ್ಲಾ ಕಾಂಗ್ರೆಸ್‌ನಲ್ಲಿ ಒಗ್ಗಟ್ಟು ಮತ್ತಷ್ಟು ಬಲಗೊಳ್ಳಲಿದೆ ಎಂದು ಶೆಟ್ಟರ್ ಹೇಳಿದರು.

**ಉಪಮುಖ್ಯಮಂತ್ರಿ ಹುದ್ದೆಗೂ ಪ್ರಬಲ ಆಗ್ರಹ– ವಿವಿಧ ಸಂಘಟನೆಗಳು, ಸಮಾಜದ ಮುಖಂಡರಿಂದ ಒಕ್ಕೊರಲ ಮನವಿ**

# 'ಮಿಸ್ಟರ್ ಕ್ಲೀನ್' ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡಲೇಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸಚಿವ ಸಂಪುಟ ಪುನಾರಚನೆ ಹಿನ್ನೆಲೆಯಲ್ಲಿ ಹಿರಿಯ ಕಾಂಗ್ರೆಸ್ ನಾಯಕ, ಮಾಜಿ ಸಚಿವ ಹಾಗೂ ಗದಗ ಶಾಸಕ ಡಾ. ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಹಾಗೂ ಉಪಮುಖ್ಯಮಂತ್ರಿ ಹುದ್ದೆಗೂ ಪರಿಗಣಿಸಬೇಕು ಎಂಬ ಒತ್ತಾಯ ಗದಗ ಜಿಲ್ಲೆಯಲ್ಲಿ ಮತ್ತಷ್ಟು ತೀವ್ರಗೊಂಡಿದೆ. ವಿವಿಧ ಸಮಾಜಗಳ ಮುಖಂಡರು, ಅಭಿಮಾನಿ ಬಳಗಗಳು ಹಾಗೂ ಸಂಘಟನೆಗಳ ಪ್ರತಿನಿಧಿಗಳು ಸೋಮವಾರ ಜಿಲ್ಲಾ ಪತ್ರಿಕಾ ಭವನದಲ್ಲಿ ಪ್ರತ್ಯೇಕ ಸುದ್ದಿಗೋಷ್ಠಿಗಳನ್ನು ನಡೆಸಿ ಕಾಂಗ್ರೆಸ್ ವರಿಷ್ಠರಿಗೆ ಒತ್ತಾಯಿಸಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಎಲ್.ಡಿ. ಚಂದಾವರಿ, ಎಚ್.ಕೆ. ಪಾಟೀಲರು ದೂರದೃಷ್ಟಿಯ ನಾಯಕರು. ಜನರ ಒಳಿತಿಗಾಗಿ 24/7 ದುಡಿಯುವ ಅಪರೂಪದ ರಾಜಕಾರಣಿ. ತಮ್ಮ ಅಧಿಕಾರಾವಧಿಯಲ್ಲಿ ಸಮಾಜದ ವಿವಿಧ ಸಮುದಾಯಗಳಿಗೆ ಭವನಗಳು, ಆರೋಗ್ಯ ಸೇವೆಗಳಿಗಾಗಿ ಆಸ್ಪತ್ರೆಗಳು, ಕ್ರೀಡಾ ಚಟುವಟಿಕೆಗಳಿಗೆ ಮೈದಾನಗಳು, ಶುದ್ಧ ಕುಡಿಯುವ ನೀರಿನ ಘಟಕಗಳು, ಕೆರೆ–ಕಟ್ಟೆಗಳ ಅಭಿವೃದ್ಧಿ, ಉದ್ಯಾನವನಗಳ ನಿರ್ಮಾಣ ಹಾಗೂ ಆಶ್ರಯ ಮನೆಗಳ ನಿರ್ಮಾಣದಂತಹ ಅನೇಕ ಜನಪರ ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ಇಂತಹ ಕಳಂಕರಹಿತ ಹಾಗೂ ಅನುಭವಿ ರಾಜಕಾರಣಿಗೆ ಸಚಿವ ಸ್ಥಾನ ನೀಡುವುದು ಅನಿವಾರ್ಯ ಎಂದು ಒತ್ತಾಯಿಸಿದರು.

> "ಯಾವ ಖಾತೆ ಕೊಟ್ಟರೂ ಅಭಿವೃದ್ಧಿಯ ಛಾಪು ಮೂಡಿಸುವ ಸಾಮರ್ಥ್ಯ ಎಚ್.ಕೆ. ಪಾಟೀಲರದ್ದು. ಉತ್ತರ ಕರ್ನಾಟಕದ ಧ್ವನಿಯಾಗಿರುವ ಅವರಿಗೆ ಸಚಿವ ಸಂಪುಟದಲ್ಲಿ ಪ್ರಮುಖ ಸ್ಥಾನ ಸಿಗಲೇಬೇಕು."
> –**ಅನಿಲಕುಮಾರ ಪಾಟೀಲ,** ಪಂಚಮಸಾಲಿ ಸಮಾಜ ಮುಖಂಡ

ಪಂಚಮಸಾಲಿ ಸಮಾಜದ ಪರವಾಗಿ ಮಾತನಾಡಿದ ಅನಿಲಕುಮಾರ ಪಾಟೀಲ, "ಉತ್ತರ ಕರ್ನಾಟಕದ ಹುಲಿ" ಎಂದೇ ಖ್ಯಾತರಾಗಿರುವ ಎಚ್.ಕೆ. ಪಾಟೀಲರು ಯಾವುದೇ ಖಾತೆ ನೀಡಿದರೂ ಅಭಿವೃದ್ಧಿಯ ಛಾಪು ಮೂಡಿಸಿದವರು. ರಾಜ್ಯದ ಅಭಿವೃದ್ಧಿ ಹಾಗೂ ಉತ್ತರ ಕರ್ನಾಟಕದ ಹಿತದೃಷ್ಟಿಯಿಂದ ಅವರಿಗೆ ಸಚಿವ ಸ್ಥಾನ ನೀಡಲೇಬೇಕು ಎಂದು ಆಗ್ರಹಿಸಿದರು.

▶▶3ನೇ ಪುಟಕ್ಕೆ



> "ಜನಸೇವೆ, ಪಾರದರ್ಶಕ ಆಡಳಿತ ಮತ್ತು ಅಭಿವೃದ್ಧಿ ಕಾರ್ಯಗಳ ಮೂಲಕ ನಾಲ್ಕು ದಶಕಗಳಿಂದ ಜನರ ವಿಶ್ವಾಸ ಗಳಿಸಿರುವ ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ಮಾತ್ರವಲ್ಲ, ಉಪಮುಖ್ಯಮಂತ್ರಿ ಹುದ್ದೆಯನ್ನೂ ನೀಡಬೇಕು."
> –**ದೀಪಕ್ ರಾಯಚೂರು,** ಜಿಲ್ಲಾ ಸವಿತಾ ಸಮಾಜದ ಮುಖಂಡ

**ಕುಡಿಯುವ ನೀರು, ನೀರಾವರಿ ಯೋಜನೆಗಳಿಗೆ ಅನುದಾನ; ಬೊಮ್ಮಾಯಿ, ಸಿ.ಸಿ. ಪಾಟೀಲ್‌ಗೆ ಅನಿಲ್ ಮೆಣಸಿನಕಾಯಿ ಅಭಿನಂದನೆ**

# ಗದಗ ಅಭಿವೃದ್ಧಿಗೆ ಹೊಸ ಚೈತನ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ ಬಹುದಿನಗಳ ಕನಸಾಗಿದ್ದ ಕುಡಿಯುವ ನೀರಿನ ಸಮಸ್ಯೆ ಪರಿಹಾರ ಹಾಗೂ ರೈತರ ಬದುಕಿಗೆ ಹೊಸ ಆಶಾಕಿರಣ ಮೂಡಿಸುವ ನೀರಾವರಿ ಯೋಜನೆಗಳಿಗೆ ಬೃಹತ್ ಅನುದಾನ ದೊ-ರೆತು ಕಾಮಗಾರಿಗಳಿಗೆ ಚಾಲನೆ ಸಿಕ್ಕಿರುವುದು ಸಂತಸ ತಂದಿದೆ ಎಂದು ಬಿಜೆಪಿ ಮುಖಂಡ ಅನಿಲ್ ಮೆಣಸಿನಕಾಯಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕೇಂದ್ರ ಸರ್ಕಾರದ 'ಅಮೃತ್



2.0' ಯೋಜನೆಯಡಿ ಗದಗ-ಬೆಟಗೇರಿ ಅವಳಿ ನಗರದ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ₹42 ಕೋಟಿ ಅನುದಾನ ಬಿಡುಗಡೆಯಾಗಿರುವುದನ್ನು ಸ್ವಾಗತಿಸಿದ್ದಾರೆ. ಡಂಬಳದಿಂದ ಗದಗ 'ಎ' ಪಾಯಿಂಟ್‌ವರೆಗೆ ಹೊಸ ಪೈಪ್‌ಲೈನ್ ಸಂಪರ್ಕ ಕಲ್ಪಿಸುವುದು ಹಾಗೂ ನಗರದ ವಿವಿಧ ಭಾಗಗಳಲ್ಲಿ ಐದು ಬೃಹತ್ ಓವರ್‌ಹೆಡ್ ಟ್ಯಾಂಕ್‌ಗಳ ನಿರ್ಮಾಣಕ್ಕಾಗಿ ಈಗಾಗಲೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿರುವುದು ಅಭಿವೃದ್ಧಿಗೆ ಹೊಸ ವೇಗ ನೀಡಲಿದೆ ಎಂದು ಹೇಳಿದ್ದಾರೆ.

ಈ ಮಹತ್ವಾಕಾಂಕ್ಷಿ ಯೋಜನೆಗೆ ಅಗತ್ಯ ಅನುದಾನ ದೊರಕಿಸುವಲ್ಲಿ ಯಶಸ್ವಿಯಾದ ಗದಗ-ಹಾವೇರಿ ಸಂಸದ ಬಸವರಾಜ್ ಬೊಮ್ಮಾಯಿ ಅವರಿಗೆ ಗದಗ ಜಿಲ್ಲೆಯ ಜನತೆಯ ಪರವಾಗಿ ಅಭಿನಂದನೆ ಸಲ್ಲಿಸಿರುವ ಅವರು, ಹಮ್ಮಿಗಿಯಿಂದ ಡಂಬಳವರೆಗೆ ಬಾಕಿ ಉಳಿದಿರುವ ಕುಡಿಯುವ ನೀರಿನ ಕಾಮಗಾರಿಯನ್ನು ಶೀಘ್ರ ಕೈಗೆತ್ತಿಕೊಳ್ಳುವಂತೆ ಮನವಿ ಮಾಡಿದ್ದಾರೆ.

> "ಕುಡಿಯುವ ನೀರು, ನೀರಾವರಿ ಹಾಗೂ ರಸ್ತೆ ಅಭಿವೃದ್ಧಿ ಯೋಜನೆಗಳು ಗದಗ-ಬೆಟಗೇರಿ ಭಾಗದ ಭವಿಷ್ಯ ರೂಪಿಸಲಿವೆ. ಈಗಾಗಲೇ ಅನುಮೋದನೆಗೊಂಡಿರುವ ವರ್ತುಲ ರಸ್ತೆ ಸೇರಿದಂತೆ ಬಾಕಿ ಉಳಿದಿರುವ ಎಲ್ಲ ಕಾಮಗಾರಿಗಳಿಗೆ ಸರ್ಕಾರ ತಕ್ಷಣ ಮರುಚಾಲನೆ ನೀಡಬೇಕು"
> – **ಅನಿಲ್ ಮೆಣಸಿನಕಾಯಿ,** ಬಿಜೆಪಿ ಮುಖಂಡ

▶▶3ನೇ ಪುಟಕ್ಕೆ

# ಜೂ.17ರಂದು ಮಹಾರಾಣಾ ಪ್ರತಾಪಸಿಂಹರ ಜಯಂತಿ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ರಾಷ್ಟ್ರವೀರ ಮಹಾರಾಣಾ ಪ್ರತಾಪಸಿಂಹರ 486ನೇ ಜಯಂತ್ಯುತ್ಸವವನ್ನು ಗದಗ-ಬೆಟಗೇರಿ ರಜಪೂತ ಸಮಾಜದ ಆಶ್ರಯದಲ್ಲಿ ಜೂನ್ 17ರಂದು ನಗರದ ಬಾಲಾಜಿ ರಸ್ತೆಯಲ್ಲಿರುವ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ಆಚರಿಸಲಾಗುವುದು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ-ಬೆಟಗೇರಿ ರಜಪೂತ ಸಮಾಜದ ಅಧ್ಯಕ್ಷ ಗಣೇಶಸಿಂಗ್ ಬ್ಯಾಳಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಜಿಮ್ಸ್ ಆಸ್ಪತ್ರೆಯ ಆರ್ಥೋ ಸರ್ಜನ್ ಡಾ. ಭೀಮಸಿಂಗ್ ವಿ. ಸಮೋರೇಕರ್ ಹಾಗೂ ಧಾರವಾಡ ಜಿಲ್ಲಾ ಆಸ್ಪತ್ರೆಯ ಹಿರಿಯ ತಜ್ಞ ವೈದ್ಯ ಡಾ. ಸಂತೋಷಸಿಂಗ್ ಶಾ ರಂಗವಾಲೆ ಭಾಗವಹಿಸಲಿದ್ದಾರೆ.

ಮಹಾರಾಣಾ ಪ್ರತಾಪಸಿಂಹರ ಜೀವನ, ಸಾಧನೆ ಹಾಗೂ ದೇಶಭಕ್ತಿಯ ಕುರಿತು ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎ. ಜಮಾದಾರ ವಿಶೇಷ ಉಪನ್ಯಾಸ ನೀಡಲಿದ್ದಾರೆ. ಅದರ ಅಂಗವಾಗಿ ಅಂದು ಬೆಳಿಗ್ಗೆ 8 ಗಂಟೆಗೆ ಬಾಲಾಜಿ ಮಂದಿರದಲ್ಲಿ ಧ್ವಜಾರೋಹಣ ನೆರವೇರಲಿದ್ದು, ಬಳಿಕ ತೆಂಗಿನಕಾಯಿ ಬಜಾರ್‌ನಲ್ಲಿರುವ ರಾಣಾ ಪ್ರತಾಪ ಸರ್ಕಲ್, ಕೋರ್ಟ್ ಅಂಡರ್ ಬ್ರಿಡ್ಜ್‌ನಲ್ಲಿರುವ ಮಹಾರಾಣಾ ಪ್ರತಾಪಸಿಂಹ ಸರ್ಕಲ್ ಹಾಗೂ ರಜಪೂತ ಗಲ್ಲಿಯ ಮಲ್ಲಿಕಾರ್ಜುನ ರಸ್ತೆಯಲ್ಲಿರುವ ಮಹಾರಾಣಾ ಪ್ರತಾಪರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಲಾಗುವುದು.

ನಂತರ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ಮಹಾರಾಣಾ ಪ್ರತಾಪಸಿಂಹರ ಭಾವಚಿತ್ರ ಪೂಜೆಯೊಂದಿಗೆ ಜಯಂತ್ಯೋತ್ಸವ ಕಾರ್ಯಕ್ರಮ ಜರುಗಲಿದೆ.

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ ಹಾಗೂ ಪದವಿ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ಮಾಡಿದ ಗದಗ-ಬೆಟಗೇರಿ ರಜಪೂತ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಗುವುದು. ಸಮಾಜದ ಸದಸ್ಯರು, ಮಹಾರಾಣಾ ಪ್ರತಾಪಸಿಂಹರ ಅಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಸಮಾಜದ ಪ್ರಕಟಣೆಯಲ್ಲಿ ಕೋರಲಾಗಿದೆ.

---

**ವೀಣಾ ತಿರ್ಲಾಪೂರ ಅವರ 'ಸೀಮೆಯಾಚೆಗೆ ಒಂದು ಅಮೆರಿಕಾ ಪಯಣ' ಕೃತಿ ಲೋಕಾರ್ಪಣೆ**

# ಅಮೆರಿಕದ ಉತ್ತಮ ಮಾದರಿಗಳು ಭಾರತದಲ್ಲೂ ಜಾರಿಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿದೇಶ ಪ್ರವಾಸ ಕೇವಲ ಪ್ರವಾಸೋದ್ಯಮಕ್ಕೆ ಸೀಮಿತವಾಗದೆ, ಅಲ್ಲಿನ ಉತ್ತಮ ಆಡಳಿತ, ಶಿಸ್ತು, ತಂತ್ರಜ್ಞಾನ ಹಾಗೂ ನಾಗರಿಕ ವ್ಯವಸ್ಥೆಗಳನ್ನು ಅಧ್ಯಯನ ಮಾಡಿ ಸ್ವದೇಶದಲ್ಲಿ ಜಾರಿಗೊಳಿಸುವ ಪ್ರಯತ್ನಗಳು ನಡೆಯಬೇಕು ಎಂದು ರಾಜ್ಯ ವಿಕೇಂದ್ರೀಕರಣ ಹಾಗೂ ಯೋಜನಾ ಮಂಡಳಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ಆಯೋಜಿಸಿದ್ದ ಲೇಖಕಿ ವೀಣಾ ತಿರ್ಲಾಪೂರ ಅವರ 'ಸೀಮೆಯಾಚೆಗೆ ಒಂದು ಅಮೆರಿಕಾ ಪಯಣ' ಪ್ರವಾಸ ಕಥನ ಕೃತಿಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

"ವಿದೇಶಗಳಲ್ಲಿ ಕಂಡ ಉತ್ತಮ ವ್ಯವಸ್ಥೆಗಳು, ತಂತ್ರಜ್ಞಾನ ಹಾಗೂ ಅಭಿವೃದ್ಧಿ ಮಾದರಿಗಳನ್ನು ನಮ್ಮ ದೇಶದಲ್ಲೂ ಅಳವಡಿಸಿಕೊಂಡರೆ ಸಮಾಜದ ಅಭಿವೃದ್ಧಿಗೆ ಹೊಸ ದಿಕ್ಕು ದೊರೆಯುತ್ತದೆ ಎಂದು ಡಿ.ಆರ್. ಪಾಟೀಲ ಹೇಳಿದರು.

ಉನ್ನತ ಹುದ್ದೆಯಲ್ಲಿರುವ ಅಧಿಕಾರಿಗಳನ್ನು ವಿದೇಶಗಳಿಗೆ ಅಧ್ಯಯನ ಪ್ರವಾಸಕ್ಕೆ ಕಳುಹಿಸಿ, ಅಲ್ಲಿನ ಉತ್ತಮ ಅಂಶಗಳನ್ನು ಇಲಾಖೆಗಳ ಮೂಲಕ ಜಾರಿಗೊಳಿಸುವ ವ್ಯವಸ್ಥೆ ಕಡ್ಡಾಯಗೊಳಿಸುವ ಕುರಿತು ಸರ್ಕಾರಕ್ಕೆ




ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಕೃತಿ ಪರಿಚಯ ಮಾಡಿದ ಪ್ರಾಧ್ಯಾಪಕ ರಾಮಚಂದ್ರ ಪಡೆಸೂರ ಮಾತನಾಡಿ, ಅಮೆರಿಕದ ವಿವಿಧ ಪ್ರದೇಶಗಳು, ಅಲ್ಲಿನ ಜೀವನ ಶೈಲಿ, ಮೂಲಸೌಕರ್ಯಗಳು, ರಸ್ತೆ ವ್ಯವಸ್ಥೆ ಹಾಗೂ ನಾಗರಿಕ ಶಿಸ್ತು ಕುರಿತ ಸಮಗ್ರ ಚಿತ್ರಣವನ್ನು ಕೃತಿ ಒಳಗೊಂಡಿದೆ ಎಂದು ಹೇಳಿದರು.

"ಪ್ರವಾಸ ಕಥನವು ಕೇವಲ ಪ್ರವಾಸದ ಅನುಭವಗಳ ಸಂಕಲನವಲ್ಲ; ಅದು ಓದುಗರನ್ನು ಹೊಸ ಜಗತ್ತಿನತ್ತ ಕರೆದೊಯ್ಯುವ ಕಿಟಕಿಯಾಗಿದೆ" ಎಂದು ಅಭಿಪ್ರಾಯಪಟ್ಟರು.

ಲೇಖಕಿ ವೀಣಾ ತಿರ್ಲಾಪೂರ ಮಾತನಾಡಿ, ಅಮೆರಿಕದ ಜನರ ಪರಿಸರ ಕಾಳಜಿ ಮತ್ತು ಜೀವ ಸಂಕುಲದ ಮೇಲಿನ ಪ್ರೀತಿ ತಮ್ಮನ್ನು ಹೆಚ್ಚು ಆಕರ್ಷಿಸಿತು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಪ್ರವಾಸ ಕಥನ ಸಾಹಿತ್ಯ ಪ್ರಕಾರದಲ್ಲಿ ವಿಶಿಷ್ಟ ಸ್ಥಾನ ಹೊಂದಿದ್ದು, ಲೇಖಕಿ ತಮ್ಮ ಅನುಭವಗಳನ್ನು ಅಕ್ಷರ ರೂಪದಲ್ಲಿ ದಾಖಲಿಸುವ ಮೂಲಕ ಓದುಗರಿಗೆ ಹೊಸ ಅನುಭವವನ್ನು ನೀಡಿದ್ದಾರೆ ಎಂದು ಶ್ಲಾಘಿಸಿದರು.

> "ಪ್ರಾಣಿ, ಪಕ್ಷಿ ಸೇರಿದಂತೆ ಪ್ರತಿಯೊಂದು ಜೀವಿಗೂ ಬದುಕುವ ಹಕ್ಕಿದೆ ಎಂಬ ಮೌಲ್ಯವನ್ನು ಅಮೆರಿಕದ ಜನರು ಆಚರಣೆಯಲ್ಲಿ ಪಾಲಿಸುತ್ತಿದ್ದಾರೆ. ಪರಿಸರದ ಮೇಲಿನ ಅವರ ಬದ್ಧತೆ ಮಾದರಿಯಾಗಿದೆ."
> – ವೀಣಾ ತಿರ್ಲಾಪೂರ, ಲೇಖಕಿ

ಅಲ್ಲಿನ ನಾಗರಿಕ ಶಿಸ್ತು, ನಿಯಮ ಪಾಲನೆ ಹಾಗೂ ಪರಿಸರ ಕಾಳಜಿಯನ್ನು ಅಳವಡಿಸಿಕೊಂಡು ಭಾರತವನ್ನು ಇನ್ನಷ್ಟು ಸುಂದರ ಹಾಗೂ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸಲು ಎಲ್ಲರೂ ಪ್ರಯತ್ನಿಸಬೇಕು ಎಂದು ಕರೆ ನೀಡಿದರು.

ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ರವಿ ಮೂಲಿಮನಿ ಮಾತನಾಡಿದರು. ದತ್ತಪ್ರಸನ್ನ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಸುರೇಶ ಕುಂಬಾರ ಸ್ವಾಗತಿಸಿದರು. ಡಿ.ಎಸ್. ಬಾಪುರಿ ವಂದಿಸಿದರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಸಕ್ತರು, ಗಣ್ಯರು ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಭಾಗವಹಿಸಿದ್ದರು.

---

**ಅಂಬೇಡ್ಕರ್, ಫುಲೆ, ಪೆರಿಯಾರ್ ಚಿಂತನೆಗಳೇ ಸಮ ಸಮಾಜದ ಅಡಿಪಾಯ**

# ಅಸಮಾನತೆಯ ವಿರುದ್ಧ ಕನ್ನಡಿಗರು ಒಂದಾಗಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದಲ್ಲಿ ಜಾತಿ, ಧರ್ಮ, ಭಾಷೆ ಅಥವಾ ಯಾವುದೇ ಜನಾಂಗ ನಮ್ಮ ಶತ್ರುಗಳಲ್ಲ. ಅಸಮಾನತೆ ಮತ್ತು ಅನ್ಯಾಯದ ವ್ಯವಸ್ಥೆಯೇ ನಮ್ಮ ನಿಜವಾದ ಶತ್ರು ಎಂದು ಸಾಮಾಜಿಕ ಹೋರಾಟಗಾರ ಅಂಹಿಸಾ ಚೇತನ್ ಹೇಳಿದರು.

ನಗರದ ಬಾಬು ಜಗಜೀವನರಾಂ ಸಭಾಭವನದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ದಲಿತ ಸಂಘರ್ಷ ಸಮಿತಿ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪ್ರತಿಭಾವಂತ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಮತ್ತು ಸಾಧಕರ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದಲಿತ ಸಂಘರ್ಷ ಸಮಿತಿ ಶಿಕ್ಷಣ, ಸಾಮಾಜಿಕ ಜಾಗೃತಿ ಹಾಗೂ ಪ್ರತಿಭಾವಂತರ ಪ್ರೋತ್ಸಾಹದ ಮೂಲಕ ಮಹತ್ವದ ಕಾರ್ಯ ಮಾಡುತ್ತಿದೆ. ಸಮಾಜಕ್ಕಾಗಿ ನಿಸ್ವಾರ್ಥವಾಗಿ ದುಡಿಯುವವರನ್ನು ಯುವಕರು ಆದರ್ಶವಾಗಿ ಸ್ವೀಕರಿಸಬೇಕು ಎಂದು



> "ಶಿಕ್ಷಿಸು, ಸಂಘಟಿಸು, ಹೋರಾಟ ಮಾಡು ಎಂಬುದು ಡಾ. ಅಂಬೇಡ್ಕರ್ ಸಮಾಜಕ್ಕೆ ನೀಡಿದ ಕ್ರಾಂತಿಕಾರಿ ಸಂದೇಶ. ಅಂಬೇಡ್ಕರ್, ಮಹಾತ್ಮ ಜ್ಯೋತಿಬಾ ಫುಲೆ ಹಾಗೂ ಪೆರಿಯಾರ್ ಅವರ ಸಿದ್ಧಾಂತಗಳ ಆಧಾರದ ಮೇಲೆ ಸಮ ಸಮಾಜ ಕಟ್ಟಿದಾಗ ಮಾತ್ರ ನ್ಯಾಯಯುತ ಮತ್ತು ಪ್ರಗತಿಪರ ಸಮಾಜ ನಿರ್ಮಾಣ ಸಾಧ್ಯ."
> – ಅಂಹಿಸಾ ಚೇತನ್

ಹೇಳಿದರು.

ಇಂದಿನ ಯುವ ಪೀಳಿಗೆಯಲ್ಲಿ ಹೋರಾಟದ ಮನೋಭಾವ ಹೆಚ್ಚಾಗುತ್ತಿರುವುದು ಆಶಾದಾಯಕ ಬೆಳವಣಿಗೆಯಾಗಿದೆ. ಅನ್ಯಾಯ ಮತ್ತು ಶೋಷಣೆಯ ವಿರುದ್ಧ ಜಾಗೃತ ಹೋರಾಟ ನಡೆಸುವ ಮೂಲಕ ಅಂಬೇಡ್ಕರ್, ಫುಲೆ ಹಾಗೂ ಪೆರಿಯಾರ್ ಅವರ ಕನಸಿನ ಸಮಾನತೆಯ ಸಮಾಜವನ್ನು ನಿರ್ಮಿಸಬೇಕಾಗಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರು ಹಾಗೂ ಪೌರ ಕಾರ್ಮಿಕರಿಗೂ ಸನ್ಮಾನ ಮಾಡಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಘಟಕದ ಅಧ್ಯಕ್ಷ ಶಿವಾನಂದ ತಮ್ಮಣ್ಣವರ ವಹಿಸಿದ್ದರು. ರಾಜ್ಯಾಧ್ಯಕ್ಷ ಮಾರುತಿ ಮಾಡ್ಡಮನಿ ಅಂಬೇಡ್ಕರ್ ಹಾಗೂ ಫುಲೆ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿದರು.

ಗ್ಯಾರಂಟಿ ಅನುಷ್ಠಾನ ಸಮಿತಿ ರೋಣ ತಾಲೂಕು ಅಧ್ಯಕ್ಷ ಮಿಥುನ್ ಪಾಟೀಲ, ಕಾಂಗ್ರೆಸ್ ವಕ್ತಾರ ಸಂಗಮೇಶ ಕೊಳ್ಳಿ ಹಾಗೂ ಡಿಎಸ್‌ಎಸ್ ರಾಜ್ಯ ಸಂಘಟನಾ ಸಂಚಾಲಕ ಎಸ್.ಎನ್. ಬಳ್ಳಾರಿ ಮಾತನಾಡಿದರು.

ವೇದಿಕೆಯಲ್ಲಿ ವಿರೂಪಾಕ್ಷಪ್ಪ ರಾಮಗೀರಿ, ಆನಂದ ಶಿಂಗಾಡಿ, ಸಿದ್ದಪ್ಪ ಲಿಂಗದಾಳ, ಶರೀಫ್ ಬಿಳಿಯಲಿ, ಬಾಲರಾಜ್ ಅರಬರ, ರಮೇಶ್ ಚಲವಾದಿ, ಶಂಭು ಕಾಳೆ, ಶಿವಪುತ್ರಪ್ಪ ಚಲವಾದಿ, ಬಸವರಾಜ ಬಿಳಿಯಲಿ, ಅನಿಲ್ ಕಾಳೆ, ರಾಘವೇಂದ್ರ ಬಿನ್ನಾಳ, ಪರಶು ಕಾಳೆ, ನಿತೀಶ ಘಟ್ಟೆಣ್ಣವರ, ಶರಣು ಕಾಳೆ, ಹನುಮಂತ ಘಟ್ಟೆಣ್ಣವರ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು. ರಾಮಚಂದ್ರ ಹಂಸನೂರು ಕಾರ್ಯಕ್ರಮ ನಿರೂಪಿಸಿದರು.

---

**'ಕರ್ತವ್ಯ' ಆ್ಯಪ್ ಜಾರಿ; ಸರ್ಕಾರಿ ಕಚೇರಿಗಳಲ್ಲಿ 100% ಹಾಜರಾತಿಗೆ ಸರ್ಕಾರದ ಕಟ್ಟುನಿಟ್ಟು**

# ಅಧಿಕಾರಿಗಳ ಗೈರುಹಾಜರಿಗೆ ಎಐ ಬ್ರೇಕ್..!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳ ಗೈರುಹಾಜರಿ, ಬಯೋಮೆಟ್ರಿಕ್ ದುರ್ಬಳಕೆ ಹಾಗೂ ಸಾರ್ವಜನಿಕರಿಗೆ ಅಧಿಕಾರಿಗಳು ಸಿಗದಿರುವ ಸಮಸ್ಯೆಗೆ ಕಡಿವಾಣ ಹಾಕುವ ಉದ್ದೇಶದಿಂದ ರಾಜ್ಯ ಸರ್ಕಾರ 'ಕರ್ತವ್ಯ' (ಕರ್ನಾಟಕ ಅಡ್ವಾನ್ಸ್ಡ್ ಅಟೆಂಡೆನ್ಸ್ ಮ್ಯಾನೇಜ್‌ಮೆಂಟ್ ಸಿಸ್ಟಮ್–ಕೆಎಎಎಂಎಸ್) ಎಂಬ ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ಅತ್ಯಾಧುನಿಕ ಹಾಜರಾತಿ ವ್ಯವಸ್ಥೆಯನ್ನು ಜಾರಿಗೆ ತಂದಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಅಧಿಕಾರ ಸ್ವೀಕರಿಸಿದ ಬಳಿಕ ಇಲಾಖಾ ಕಾರ್ಯದರ್ಶಿಗಳೊಂದಿಗೆ ನಡೆಸಿದ ಮೊದಲ ಸಭೆಯಲ್ಲಿಯೇ ಸರ್ಕಾರಿ ನೌಕರರು ಕಚೇರಿ ವೇಳೆಯಲ್ಲಿ ಕಡ್ಡಾಯವಾಗಿ ಹಾಜರಿರಬೇಕು ಹಾಗೂ ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಸೂಚನೆ ನೀಡಿದ್ದರು. ಇದರ ಬೆನ್ನಲ್ಲೇ 'ಕರ್ತವ್ಯ' ವ್ಯವಸ್ಥೆ ಅನುಷ್ಠಾನಗೊಳ್ಳುತ್ತಿದೆ.

ಈ ಹಿಂದೆ ಜಾರಿಯಲ್ಲಿದ್ದ ಬಯೋಮೆಟ್ರಿಕ್ ವ್ಯವಸ್ಥೆಯಲ್ಲಿ ಹಾಜರಾತಿ ದಾಖಲಿಸಿ ಕಚೇರಿಯಿಂದ



ಹೊರ ಹೋಗುವ ಸಾಧ್ಯತೆ ಇತ್ತು. ಆದರೆ ಹೊಸ ವ್ಯವಸ್ಥೆಯಲ್ಲಿ ಎಐ ಆಧಾರಿತ ಮುಖ ಗುರುತಿಸುವಿಕೆ ಹಾಗೂ ಜಿಯೋಫೆನ್ಸಿಂಗ್ ತಂತ್ರಜ್ಞಾನದ ಮೂಲಕ ಉದ್ಯೋಗಿ ಕಚೇರಿ ವ್ಯಾಪ್ತಿಯಲ್ಲೇ ಇದ್ದಾರೆಯೇ ಎಂಬುದನ್ನು ಪರಿಶೀಲಿಸಲಾಗುತ್ತದೆ.

'ಕರ್ತವ್ಯ' ಸಾಫ್ಟ್‌ವೇರ್‌ನ್ನು ಯಾವುದೇ ಖಾಸಗಿ ಸಂಸ್ಥೆಯ ನೆರವಿಲ್ಲದೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಸೆಂಟರ್ ಫಾರ್ ಇ-ಗವರ್ನೆನ್ಸ್ (ಸಿಇಜಿ) ಹಾಗೂ ಕರ್ನಾಟಕ ಎಐ ಸೆಲ್ ಜಂಟಿಯಾಗಿ ಅಭಿವೃದ್ಧಿಪಡಿಸಿವೆ. ಇದರಿಂದ ಸರ್ಕಾರದ ಕೋಟ್ಯಂತರ ರೂಪಾಯಿ ವೆಚ್ಚ ಉಳಿತಾಯವಾಗಿದ್ದು, ದತ್ತಾಂಶ ಸುರಕ್ಷತೆ ಹಾಗೂ ಸ್ವಾಯತ್ತತೆ ಹೆಚ್ಚಿದೆ.

**ಒಂದೇ ವಾರದಲ್ಲಿ 25% ಏರಿಕೆ**

ಯೋಜನೆಗೆ ಸರ್ಕಾರಿ ನೌಕರರಿಂದ ಉತ್ತಮ ಸ್ಪಂದನೆ ದೊರೆತಿದ್ದು, ಕಳೆದ ವಾರ 2.46 ಲಕ್ಷ ಇದ್ದ ನೋಂದಣಿ ಸಂಖ್ಯೆ ಈಗ 3.01 ಲಕ್ಷಕ್ಕೆ ಏರಿಕೆಯಾಗಿದೆ. ಕೇವಲ ಒಂದೇ ವಾರದಲ್ಲಿ 55 ಸಾವಿರಕ್ಕೂ ಅಧಿಕ ನೌಕರರು ಹೊಸದಾಗಿ ನೋಂದಾಯಿಸಿಕೊಂಡಿದ್ದಾರೆ.

ಅದೇ ರೀತಿ ಪ್ರತಿದಿನ ಆ್ಯಪ್ ಮೂಲಕ ಹಾಜರಾತಿ ದಾಖಲಿಸುವವರ ಸಂಖ್ಯೆ 1.85 ಲಕ್ಷದಿಂದ 2.32 ಲಕ್ಷಕ್ಕೆ ಏರಿಕೆಯಾಗಿದ್ದು, ಸಕ್ರಿಯ ಬಳಕೆಯಲ್ಲಿ ಶೇ.25ರಷ್ಟು ಹೆಚ್ಚಳ ದಾಖಲಾಗಿದೆ.

ಪ್ರಸ್ತುತ 42 ಇಲಾಖೆಗಳ 4.78 ಲಕ್ಷಕ್ಕೂ ಹೆಚ್ಚು ನೌಕರರನ್ನು ಈ ವ್ಯವಸ್ಥೆಗೆ ಒಳಪಡಿಸಲಾಗಿದೆ. ಶಾಲಾ ಶಿಕ್ಷಣ ಇಲಾಖೆಯ 1.68 ಲಕ್ಷಕ್ಕೂ ಹೆಚ್ಚು ನೌಕರರು ಈಗಾಗಲೇ ನೋಂದಾಯಿಸಿಕೊಂಡಿದ್ದು, ದೈನಂದಿನ ಹಾಜರಾತಿಯಲ್ಲಿ ಮೊದಲ ಸ್ಥಾನದಲ್ಲಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ 66 ಸಾವಿರಕ್ಕೂ ಅಧಿಕ ನೋಂದಣಿಯೊಂದಿಗೆ ಎರಡನೇ ಸ್ಥಾನದಲ್ಲಿದೆ.

ಮೊಬೈಲ್ ಆ್ಯಪ್ ಮೂಲಕವೇ ಹಾಜರಾತಿ ದಾಖಲಿಸುವ ವ್ಯವಸ್ಥೆ ಇರುವುದರಿಂದ ಬಯೋಮೆಟ್ರಿಕ್ ಯಂತ್ರಗಳ ಮುಂದೆ ಸಾಲಿನಲ್ಲಿ ನಿಲ್ಲುವ ಅಗತ್ಯ ತಪ್ಪಿದೆ. ಜೊತೆಗೆ ಮುಖ್ಯಮಂತ್ರಿ, ಮುಖ್ಯ ಕಾರ್ಯದರ್ಶಿ ಹಾಗೂ ಜಿಲ್ಲಾಧಿಕಾರಿಗಳು ದಿನನಿತ್ಯ ಈ ವ್ಯವಸ್ಥೆಯ ಡ್ಯಾಶ್‌ಬೋರ್ಡ್‌ನ್ನು ಪರಿಶೀಲಿಸಲಿದ್ದಾರೆ.

ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರ ಪ್ರಕಾರ, ಅಧಿಕಾರಿಗಳ ಲಭ್ಯತೆ ಖಚಿತವಾಗುವುದರಿಂದ ಸಾರ್ವಜನಿಕರಿಗೆ ಸೇವೆಗಳು ವೇಗವಾಗಿ ಹಾಗೂ ಸುಲಭವಾಗಿ ದೊರೆಯಲಿದ್ದು, ಡಿಜಿಟಲ್ ಆಡಳಿತದಲ್ಲಿ ಕರ್ನಾಟಕ ಹೊಸ ಮೈಲಿಗಲ್ಲು ಸ್ಥಾಪಿಸಿದೆ.

---

**ಗಾಣಿಗ ಸಮಾಜದ 135 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ; ಬಡ ಮಕ್ಕಳ ಶಿಕ್ಷಣಕ್ಕೆ ಸಮಾಜವೇ ಬೆನ್ನೆಲುಬಾಗಲಿ ಎಂದ ಸದಾಶಿವಾನಂದ ಸ್ವಾಮೀಜಿ**

# ಶಿಕ್ಷಣವೇ ಸಮಾಜದ ಶಕ್ತಿ; ಪ್ರತಿಭೆಗಳೇ ಭವಿಷ್ಯದ ಸಂಪತ್ತು

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಶಿಕ್ಷಣವೇ ಮೂಲಾಧಾರವಾಗಿದ್ದು, ಪಾಲಕರು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಉನ್ನತ ಗುರಿ ಸಾಧನೆಗೆ ಪ್ರೋತ್ಸಾಹಿಸಬೇಕು ಎಂದು ಶಿವಾನಂದ ಬ್ರಹನ್ಮಠದ ಸದಾಶಿವಾನಂದ ಸ್ವಾಮೀಜಿ ಹೇಳಿದರು.

ನಗರದ ವಿವೇಕಾನಂದ ನಗರದ ಗಾಣಿಗ ಸಮುದಾಯ ಭವನದಲ್ಲಿ ಶನಿವಾರ ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗವರ್ಧಕ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರ ಸನ್ಮಾನ, ವಾರ್ಷಿಕ ಸಭೆ ಹಾಗೂ ವಧು-ವರರ ಸಮಾವೇಶ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಶಿಕ್ಷಣವು ವ್ಯಕ್ತಿಯ ಬೌದ್ಧಿಕ ಬೆಳವಣಿಗೆಗೆ ಮಾತ್ರ ಸೀಮಿತವಾಗಿಲ್ಲ. ಅದು ಆರ್ಥಿಕ ಸ್ವಾವಲಂಬನೆ, ಉತ್ತಮ ಆರೋಗ್ಯ, ಸಂಸ್ಕಾರ ಮತ್ತು ಸಮಾಜದ ಪ್ರಗತಿಗೆ ದಾರಿಯಾಗುತ್ತದೆ. ಸಮಾಜದ ಮಕ್ಕಳ ಭವಿಷ್ಯ ಉಜ್ವಲಗೊಳಿಸುವ ನಿಟ್ಟಿನಲ್ಲಿ ಸಮುದಾಯ ಭವನದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಕೋಚಿಂಗ್ ತರಗತಿಗಳನ್ನು ಆರಂಭಿಸಬೇಕು. ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉತ್ತಮ ಮಾರ್ಗದರ್ಶನ



ನೀಡುವ ಕೆಲಸವನ್ನು ಸಮಾಜದ ಮುಖಂಡರು ಕೈಗೆತ್ತಿಕೊಳ್ಳಬೇಕು ಎಂದು ಸಲಹೆ ನೀಡಿದರು.

**ಸಂಸ್ಕಾರವಿಲ್ಲದ ಶಿಕ್ಷಣ ಅಪೂರ್ಣ: ಬೆನಕೊಪ್ಪ**

ನಿವೃತ್ತ ಡಿಡಿಪಿಐ ಐ.ಬಿ. ಬೆನಕೊಪ್ಪ ಮಾತನಾಡಿ, ಆಧುನಿಕ ಜೀವನಶೈಲಿಯಿಂದ ಮಾನಸಿಕ ನೆಮ್ಮದಿ ಕಳೆದುಕೊಳ್ಳುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಯುವಜನತೆ ದಾರಿ ತಪ್ಪದಂತೆ ಪಾಲಕರು ಮಕ್ಕಳಿಗೆ ಉತ್ತಮ ಸಂಸ್ಕಾರ ಹಾಗೂ ಮೌಲ್ಯಗಳನ್ನು ಕಲಿಸಬೇಕು ಎಂದು ಹೇಳಿದರು.

"ಅಂಕಗಳು ಮಾತ್ರ ಪ್ರತಿಭೆಯ ಮಾನದಂಡವಲ್ಲ. ಪ್ರತಿಯೊಬ್ಬ ಮಗುವಿನಲ್ಲೂ ವಿಶಿಷ್ಟ ಪ್ರತಿಭೆ ಅಡಗಿದೆ. ಅದನ್ನು ಗುರುತಿಸಿ ಬೆಳೆಸುವ ಜವಾಬ್ದಾರಿ ಶಿಕ್ಷಕರು ಹಾಗೂ ಪಾಲಕರ ಮೇಲಿದೆ" ಎಂದು ಅಭಿಪ್ರಾಯಪಟ್ಟರು.

**ಶಿಕ್ಷಣವೇ ಯಶಸ್ಸಿನ ಮೆಟ್ಟಿಲು: ಬಸವರಾಜ ಕೆಂಪವಾಡ**

ಭಾರತೀಯ ಅರಣ್ಯ ಸೇವೆಯಲ್ಲಿ ರಾಷ್ಟ್ರ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಬಸವರಾಜ ಕೆಂಪವಾಡ ಮಾತನಾಡಿ, ಉತ್ತಮ ಶಿಕ್ಷಣ ವ್ಯಕ್ತಿಯನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ಯುತ್ತದೆ. ಪೋಷಕರು ಮಕ್ಕಳ ಮೇಲೆ ಅನಗತ್ಯ ಒತ್ತಡ ಹೇರದೇ, ಅವರ ಆಸಕ್ತಿ ಮತ್ತು ಸಾಮರ್ಥ್ಯಕ್ಕೆ ತಕ್ಕಂತೆ ಶಿಕ್ಷಣ ಪಡೆಯಲು ಅವಕಾಶ ಕಲ್ಪಿಸಬೇಕು ಎಂದರು.

> "ಸಮಾಜದ ಪ್ರಗತಿಗೆ ಶಿಕ್ಷಣವೇ ಅಡಿಪಾಯ. ಬಡ ಹಾಗೂ ಪ್ರತಿಭಾವಂತ ಮಕ್ಕಳ ಶಿಕ್ಷಣಕ್ಕೆ ಸಮಾಜವೇ ಬೆನ್ನೆಲುಬಾಗಿ ನಿಲ್ಲಬೇಕು; ಆಗ ಮಾತ್ರ ಉಜ್ವಲ ಭವಿಷ್ಯದ ಸಮಾಜ ನಿರ್ಮಾಣ ಸಾಧ್ಯ."
> – ಸದಾಶಿವಾನಂದ ಸ್ವಾಮೀಜಿ, ಶಿವಾನಂದ ಬ್ರಹನ್ಮಠ

ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡಲು ಶಿಸ್ತು, ಪರಿಶ್ರಮ ಹಾಗೂ ಸ್ಪಷ್ಟ ಗುರಿ ಅಗತ್ಯ. ಸಮಾಜಕ್ಕೆ ಏನಾದರೂ ಕೊಡುಗೆ ನೀಡುವ ಮನೋಭಾವ ಪ್ರತಿಯೊಬ್ಬ ಯುವಕರಲ್ಲೂ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಹತ್ತು ವರ್ಷಗಳಿಂದ ಪ್ರತಿಭೆಗೆ ಪ್ರೋತ್ಸಾಹ ಜಿಲ್ಲಾ ಗಾಣಿಗ ಸಮಾಜದ ಅಧ್ಯಕ್ಷ ಬಸವರಾಜ ಬಿಂಗಿ ಮಾತನಾಡಿ, ಕಳೆದ ಹತ್ತು ವರ್ಷಗಳಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ನಿರಂತರವಾಗಿ ಆಯೋಜಿಸಲಾಗುತ್ತಿದೆ. ಸಮಾಜದ ವಿದ್ಯಾರ್ಥಿಗಳನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಸ್ಪಷ್ಟ ಗುರಿ ಇಟ್ಟುಕೊಂಡು ಅಧ್ಯಯನ ಮಾಡಿದರೆ ಮಾತ್ರ ಉನ್ನತ ಸಾಧನೆ ಸಾಧ್ಯ. ಗಾಣಿಗ ಸಮಾಜದ ವಿದ್ಯಾರ್ಥಿಗಳು ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಹೆಸರು ಮಾಡುವಂತಾಗಬೇಕು ಎಂದು ಆಶಿಸಿದರು.

135 ಪ್ರತಿಭಾವಂತರಿಗೆ ಗೌರವ ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಅಂಕ ಗಳಿಸಿದ ಸುಮಾರು 135 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ಭಾರತೀಯ ಅರಣ್ಯ ಸೇವೆಯಲ್ಲಿ ರಾಷ್ಟ್ರಕ್ಕೆ ಪ್ರಥಮ ಸ್ಥಾನ ಪಡೆದ ಬಸವರಾಜ ಕೆಂಪವಾಡ ಅವರನ್ನು ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಗೌರವಾಧ್ಯಕ್ಷ ಷಣ್ಮುಖಪ್ಪ ಬಡ್ನಿ, ಕಟ್ಟಡ ಸಮಿತಿ ಅಧ್ಯಕ್ಷ ಹಾಗೂ ಜಿಪಂ ಮಾಜಿ ಅಧ್ಯಕ್ಷ ನಿಂಗಪ್ಪ ಕೆಂಗಾರ, ಜಿಲ್ಲಾ ಗಾಣಿಗ ಸಮಾಜದ ಉಪಾಧ್ಯಕ್ಷ ಬಿ.ಬಿ. ಐನಾಪೂರ, ಸಮಾಜದ ಮುಖಂಡರಾದ ಅಶೋಕ ಮಂದಾಲಿ, ಸಿದ್ದು ಪಾಟೀಲ ಸೇರಿದಂತೆ ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗವರ್ಧಕ ಟ್ರಸ್ಟ್‌ನ ಪದಾಧಿಕಾರಿಗಳಾದ ಮುರುಘರಾಜೇಂದ್ರ ಬಡ್ನಿ, ಸುರೇಶ ಮರಳಪ್ಪನವರ, ಎಸ್.ವಿ. ಪವಾಡಿಗೌಡ್ರ, ಗಿರಿಯಪ್ಪ ಅಸೂಟಿ, ಗಂಗಾಧರ ಗಾಣಿಗೇರ, ರಮೇಶ ಮಂದಾಲಿ, ಬಿ.ಎಸ್. ವಡವಟ್ಟಿ, ದಶರಥ ಗಾಣಿಗೇರ, ಬಸವರಾಜ ಸುಂಕದ, ಫಕೀರಪ್ಪ ಸಿಂಧಗಿ, ಹಾಲಪ್ಪ ಬಣವಿ, ಅಮರೇಶ ಹಾದಿ, ಶ್ರೀಕಾಂತ ಲಕ್ಕುಂಡಿ, ತೋಟಪ್ಪ ಗಾಣಿಗೇರ, ಐ.ಎಂ. ಕಿರೇಸೂರ, ಬಸವಂತಪ್ಪ ನವಲಳ್ಳಿ, ಸಂದೀಪ ಬೆಳವಟಗಿ, ಬಸವರಾಜ ನಲವಗುಂದ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

---

**ಅಭಿಮಾನಿಗಳಿಂದ ಶಕ್ತಿ ಪ್ರದರ್ಶನ–ಕಾಂಗ್ರೆಸ್ ಹೈಕಮಾಂಡ್‌ಗೆ ಎಚ್ಚರಿಕೆಯ ಸಂದೇಶ**

# ಎಚ್ಕೆಪಿಗೆ ಸಚಿವ ಸ್ಥಾನಕ್ಕಾಗಿ ಇಂದು ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ದಕ್ಷ, ಪ್ರಾಮಾಣಿಕ, ಕಳಂಕರಹಿತ ಹಾಗೂ ನಾಡು ಕಂಡ ಅಪರೂಪದ ರಾಜಕಾರಣಿಯಾಗಿರುವ ಎಚ್.ಕೆ. ಪಾಟೀಲ ಅವರನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ನೇತೃತ್ವದ ಸಚಿವ ಸಂಪುಟದಲ್ಲಿ ಸೇರಿಸಿಕೊಳ್ಳದಿರುವುದನ್ನು ಖಂಡಿಸಿ, ಅವರ ಅಭಿಮಾನಿ ಬಳಗದ ವತಿಯಿಂದ ಜೂನ್ 16ರಂದು ಗದಗದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹಾಗೂ ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಭಾನುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂನ್ 16ರಂದು ಬೆಳಿಗ್ಗೆ 11 ಗಂಟೆಗೆ ದಿ. ಕಾಟನ್ ಸೇಲ್ ಸೊಸೈಟಿಯಿಂದ ಪ್ರತಿಭಟನಾ ಮೆರವಣಿಗೆ ಆರಂಭವಾಗಿ ಭೂಮರಡ್ಡಿ ಸರ್ಕಲ್, ಮಹಾತ್ಮ ಗಾಂಧಿ ಸರ್ಕಲ್, ಮಹೇಂದ್ರಕರ್ ಸರ್ಕಲ್, ಟಾಂಗಾ ಕೂಟ, ಬಸವೇಶ್ವರ ಸರ್ಕಲ್, ಪಂಚರ ಹೊಂಡ ಹಾಗೂ ಜೋಡ ಮಾರುತಿ ದೇವಸ್ಥಾನ ಮಾರ್ಗವಾಗಿ ಮುಳಗುಂದ ನಾಕಾ ತಲುಪಿ ಪ್ರತಿಭಟನೆ ನಡೆಸಲಾಗುವುದು ಎಂದು ಹೇಳಿದರು.

ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ಅವಶ್ಯಕತೆಯಿಲ್ಲ, ಆದರೆ ರಾಜ್ಯಕ್ಕೆ ಅವರ ಸೇವೆಯ ಅವಶ್ಯಕತೆ ಇದೆ. ರಾಜ್ಯದ ನೆಲ, ಜಲ ಹಾಗೂ ಭಾಷೆಯ ಅಭಿವೃದ್ಧಿಗೆ ಅವರಂತಹ ಅನುಭವಿ ನಾಯಕ ಸಚಿವ ಸಂಪುಟದಲ್ಲಿರಬೇಕು. ಗದಗ ಜಿಲ್ಲೆ ಹಾಗೂ ಗದಗ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಗೂ ಅವರ ಮಾರ್ಗದರ್ಶನ ಅಗತ್ಯವಾಗಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಉಪಮುಖ್ಯಮಂತ್ರಿ ಜಿ. ಪರಮೇಶ್ವರ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್,




> "ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ಎಂಬುದು ವ್ಯಕ್ತಿಗತ ಗೌರವದ ಪ್ರಶ್ನೆಯಲ್ಲ; ರಾಜ್ಯ ಹಾಗೂ ಗದಗ ಜಿಲ್ಲೆಯ ಅಭಿವೃದ್ಧಿಗೆ ಅವರ ಅನುಭವ ಮತ್ತು ನಾಯಕತ್ವ ಸಚಿವ ಸಂಪುಟದಲ್ಲಿರಬೇಕೆಂಬುದು ಜನರ ಒತ್ತಾಯವಾಗಿದೆ"
> – ಬಿ.ಬಿ. ಅಸೂಟಿ, ಶಹರ ಘಟಕದ ಅಧ್ಯಕ್ಷ

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಪಕ್ಷದ ವರಿಷ್ಠರು ಹಾಗೂ ಹೈಕಮಾಂಡ್ ಮುಂಬರುವ ಸಚಿವ ಸಂಪುಟ ವಿಸ್ತರಣೆಯಲ್ಲಿ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ ಮಾತನಾಡಿ, ಮೊದಲ ಸಚಿವ ಸಂಪುಟದಲ್ಲಿ ಎಚ್.ಕೆ. ಪಾಟೀಲ ಅವರ ಹೆಸರು ಇಲ್ಲದಿರುವುದು ಆಶ್ಚರ್ಯ ಹಾಗೂ ನೋವುಂಟು ಮಾಡಿದೆ ಎಂದು ಹೇಳಿದರು. ಕಳೆದ ನಾಲ್ಕು ದಶಕಗಳಿಂದ ಕಾಂಗ್ರೆಸ್ ಪಕ್ಷದ ಸಂಘಟನೆಗೆ ದುಡಿಯುತ್ತಾ ಅನೇಕ ಹುದ್ದೆಗಳನ್ನು ಯಶಸ್ವಿಯಾಗಿ ನಿರ್ವಹಿಸಿರುವ ಹಿರಿಯ ನಾಯಕರಿಗೆ ಸಚಿವ ಸ್ಥಾನ ನೀಡಬೇಕಾಗಿತ್ತು ಎಂದು ಅಭಿಪ್ರಾಯಪಟ್ಟರು.

1993ರಿಂದ ಈವರೆಗೆ ಜವಳಿ, ನೀರಾವರಿ, ಕಾನೂನು, ಪ್ರವಾಸೋದ್ಯಮ ಹಾಗೂ ಗ್ರಾಮೀಣಾಭಿವೃದ್ಧಿ-ಪಂಚಾಯತ್‌ರಾಜ್ ಸೇರಿದಂತೆ ಹಲವು ಪ್ರಮುಖ ಖಾತೆಗಳನ್ನು ನಿರ್ವಹಿಸಿರುವ ಎಚ್.ಕೆ. ಪಾಟೀಲ ರಾಜ್ಯದ ಜನತೆ ನೆನಪಿಡುವಂತಹ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಇಂತಹ ಸಮರ್ಥ ಹಾಗೂ ಅನುಭವಿ ನಾಯಕರಿಗೆ ಸಚಿವ ಸ್ಥಾನ ನಿರಾಕರಿಸಿರುವುದು ಅನ್ಯಾಯವಾಗಿದ್ದು, ಮುಂಬರುವ ಸಚಿವ ಸಂಪುಟ ವಿಸ್ತರಣೆಯಲ್ಲಿ ಅವಕಾಶ ನೀಡಲೇಬೇಕು ಎಂದು ಒತ್ತಾಯಿಸಿದರು.

ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ರವಿ ಮೂಲಿಮನಿ ಮಾತನಾಡಿ, ರಾಜ್ಯದ ಗ್ರಾಮೀಣ ಭಾಗಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆಗೆ ಪ್ರೇರಣೆ ನೀಡುವ ಮೂಲಕ ಬಡಜನರ ಬದುಕಿನಲ್ಲಿ ಬದಲಾವಣೆ ತಂದ ನಾಯಕ ಎಚ್.ಕೆ. ಪಾಟೀಲ. ಮಹಾತ್ಮ ಗಾಂಧೀಜಿ ಕನಸು ಕಂಡ ಗ್ರಾಮೀಣ ಅಭಿವೃದ್ಧಿಗೆ ಹೊಸ ದಿಕ್ಕು ನೀಡಿದ ಅವರಂತಹ ದಿಟ್ಟ ಹಾಗೂ ಪ್ರಾಮಾಣಿಕ ನಾಯಕರಿಗೆ ಸಚಿವ ಸ್ಥಾನ ನೀಡುವುದು ನ್ಯಾಯಸಮ್ಮತವಾಗಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮುಳಗುಂದ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಸವರಾಜ ಸುಂಕಾಪೂರ, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ನೀಲಮ್ಮ ಬೋಳನವರ, ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ಅಶೋಕ ಮಂದಾಲಿ, ನಗರಸಭೆ ಸದಸ್ಯ ಬರಕತಅಲಿ ಮುಲ್ಲಾ, ಅನ್ವರ ನದಾಫ್, ಬಸವರಾಜ ಕಡೆಮನಿ, ಶಾಂತಣ್ಣ ಮುಳವಾಡ, ಬಿ.ಆರ್. ದೇವರಡ್ಡಿ, ವಿದ್ಯಾಧರ ದೊಡ್ಡಮನಿ, ಮಹಮ್ಮದ್ ಶಾಲಗಾರ, ಹುಲ್ಲೇಶ್ ಭಜಂತ್ರಿ, ಮಾಂತೇಶ ಮಡಿವಾಳರ, ಪರಪ್ಪ ಕಮತರ, ಅನಿಲ ಗರಗ, ಸರ್ಫರಾಜ್ ಬಬರ್ಚಿ, ಮೋಹನ ದುರಗಣ್ಣವರ, ಜಾಕೀರ ಕುನ್ನಿಬಾವಿ, ಚಂದ್ರಪ್ಪ ಕರಿಕಟ್ಟಿ, ಸಮೀರ ಕೊಟ್ಟೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗದಗ ಅಭಿವೃದ್ಧಿಗೆ ಹೊಸ ಚೈತನ್ಯ

▶▶ ಮೊದಲನೇ ಪುಟದಿಂದ

ಇದೇ ವೇಳೆ ₹187 ಕೋಟಿ ವೆಚ್ಚದ ಜಾಲವಾಡಗಿ ಏತ ನೀರಾವರಿ ಯೋಜನೆ ಈ ಭಾಗದ ರೈತರಿಗೆ ವರದಾನವಾಗಲಿದ್ದು, ಯೋಜನೆ ಅನುಷ್ಠಾನಕ್ಕೆ ಅಂದಿನ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ, ಸಚಿವರಾಗಿದ್ದ ಸಿ.ಸಿ. ಪಾಟೀಲ್, ಶಾಸಕರಾಗಿದ್ದ ಕಳಕಪ್ಪ ಬಂಡಿ ಹಾಗೂ ಮಾಜಿ ಸಂಸದ ಶಿವಕುಮಾರ ಉದಾಸಿ ಅವರು ಸಾಕಷ್ಟು ಶ್ರಮಿಸಿದ್ದರು ಎಂದು ಸ್ಮರಿಸಿದ್ದಾರೆ.

ಯೋಜನೆಗೆ ಅನುದಾನ ಬಿಡುಗಡೆಯಾಗಿದ್ದರೂ ಕಾಮಗಾರಿಗೆ ಚಾಲನೆ ದೊರೆತಿರಲಿಲ್ಲ. ಇದೀಗ ಕಾಮಗಾರಿ ಆರಂಭವಾಗಿರುವುದು ರೈತಾಪಿ ವಲಯದಲ್ಲಿ ಹೊಸ ಆಶಾಭಾವನೆ ಮೂಡಿಸಿದೆ ಎಂದು ತಿಳಿಸಿದ್ದಾರೆ.

ಜಾಲವಾಡಗಿ ಏತ ನೀರಾವರಿ ಯೋಜನೆಯಡಿ ಗದಗ ವಿಧಾನಸಭಾ ಕ್ಷೇತ್ರದ 17 ಪ್ರಮುಖ ಕೆರೆಗಳ ಜೊತೆಗೆ ರೋಣ ಮತ್ತು ಶಿರಹಟ್ಟಿ ಕ್ಷೇತ್ರಗಳ ಕೆರೆಗಳನ್ನು ತುಂಬಿಸುವ ಯೋಜನೆ ರೂಪಿಸಲಾಗಿದ್ದು, ಇದರಿಂದ ಅಂತರ್ಜಲ ಮಟ್ಟ ಹೆಚ್ಚಳವಾಗಿ ಕೃಷಿ ಚಟುವಟಿಕೆಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.

ಗದಗ-ಬೆಟಗೇರಿ ಅವಳಿ ನಗರದ ಬಾಕಿ ಉಳಿದಿರುವ ವರ್ತುಲ ರಸ್ತೆ ನಿರ್ಮಾಣಕ್ಕೂ ತಕ್ಷಣ ಮರುಚಾಲನೆ ನೀಡುವಂತೆ ಸರ್ಕಾರವನ್ನು ಅವರು ಒತ್ತಾಯಿಸಿದ್ದಾರೆ. ಸಂಸದ ಬಸವರಾಜ್ ಬೊಮ್ಮಾಯಿ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ₹473 ಕೋಟಿ ವೆಚ್ಚದ ವರ್ತುಲ ರಸ್ತೆ ಯೋಜನೆಗೆ ಸಚಿವ ಸಂಪುಟ ಹಾಗೂ ಹಣಕಾಸು ಇಲಾಖೆಯ ಅನುಮೋದನೆ ದೊರೆತಿದ್ದರೂ, ನಂತರದ ದಿನಗಳಲ್ಲಿ ಯೋಜನೆ ನೆನೆಗುದಿಗೆ ಬಿದ್ದಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಇದಲ್ಲದೆ, ಹಳೆ ಕೋರ್ಟ್ ಹಾಗೂ ಜೆ.ಟಿ. ಕಾಲೇಜು ಸಮೀಪದ ರೈಲ್ವೆ ಅಂಡರ್‌ಪಾಸ್‌ಗಳನ್ನು ಓವರ್‌ಬ್ರಿಡ್ಜ್‌ಗಳಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಈಗಾಗಲೇ ಆಯ್ಕೆಯಾಗಿದ್ದು, ಅಗತ್ಯ ಅನುದಾನ ಬಿಡುಗಡೆಗೊಳಿಸಿ ಕಾಮಗಾರಿಗಳನ್ನು ಶೀಘ್ರ ಆರಂಭಿಸಲು ಸಂಸದ ಬಸವರಾಜ್ ಬೊಮ್ಮಾಯಿ ಮುಂದಾಗಬೇಕು ಎಂದು ಅನಿಲ ಮೆಣಸಿನಕಾಯಿ ಮನವಿ ಮಾಡಿದ್ದಾರೆ. ಈ ಕಾಮಗಾರಿಗಳು ಪೂರ್ಣಗೊಂಡರೆ ವಾಹನ ಸಂಚಾರ ದಟ್ಟಣೆ ಕಡಿಮೆಯಾಗುವುದರ ಜೊತೆಗೆ ಮಳೆಗಾಲದಲ್ಲಿ ಅಂಡರ್‌ಪಾಸ್‌ಗಳಲ್ಲಿ ನೀರು ನಿಲ್ಲುವ ಸಮಸ್ಯೆಗೂ ಶಾಶ್ವತ ಪರಿಹಾರ ದೊರೆಯಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

## ನೈಸರ್ಗಿಕ ಕೃಷಿಯೇ ರೈತರ ಭವಿಷ್ಯದ ಭದ್ರತೆ; ಕಡಕೋಳ ಕಾರ್ಯಾಗಾರದಲ್ಲಿ ಸದಾನಂದಗೌಡ ಎಚ್ಚರಿಕೆ

# ಭೂಮಿಯ ಫಲವತ್ತತೆ ಅಪಾಯದ ಅಂಚಿನಲ್ಲಿ

**■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಅತಿಯಾದ ರಾಸಾಯನಿಕ ಗೊಬ್ಬರ ಹಾಗೂ ಕೀಟನಾಶಕಗಳ ಬಳಕೆಯಿಂದ ಕೃಷಿ ಭೂಮಿ ತನ್ನ ಫಲವತ್ತತೆಯನ್ನು ಕಳೆದುಕೊಂಡು ಬರಡಾಗುತ್ತಿದೆ. ರೈತರು ಸಾವಯವ ಕೃಷಿಯತ್ತ ಹೆಚ್ಚು ಒಲವು ತೋರಿಸಿ, ಮಣ್ಣಿನ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ ಕರೆ ನೀಡಿದರು.

ತಾಲೂಕಿನ ಕಡಕೋಳ ಗ್ರಾಮದ ದೇವರಡ್ಡಿ ಅಗಸನಕೊಪ್ಪ ಕೃಷಿ ಆಶ್ರಮದಲ್ಲಿ ಭಾರತೀಯ ಜನತಾ ಪಾರ್ಟಿ ಜಿಲ್ಲಾ ರೈತ ಮೋರ್ಚಾ ವತಿಯಿಂದ ಆಯೋಜಿಸಿದ್ದ ನೈಸರ್ಗಿಕ ಕೃಷಿ ಕಾರ್ಯಾಗಾರವನ್ನು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಸಾವಯವ ಕೃಷಿ ಪದ್ಧತಿಯು ಮಣ್ಣಿನ ಆರೋಗ್ಯ ಸುಧಾರಿಸುವುದರ ಜೊತೆಗೆ ಪರಿಸರ ಸಂರಕ್ಷಣೆ ಮತ್ತು ದೀರ್ಘಕಾಲಿಕ ಕೃಷಿ ಉತ್ಪಾದನೆಗೆ ಸಹಕಾರಿಯಾಗುತ್ತದೆ. ಗೋಮಯ, ಕಾಂಪೋಸ್ಟ್, ಹಸಿರು ಗೊಬ್ಬರ ಸೇರಿದಂತೆ ವಿವಿಧ ಸಾವಯವ ಗೊಬ್ಬರಗಳ ಬಳಕೆಯಿಂದ ಮಣ್ಣಿನ ಫಲವತ್ತತೆ ಹೆಚ್ಚುತ್ತದೆ. ರಾಸಾಯನಿಕ ಗೊಬ್ಬರ ಹಾಗೂ ಕೀಟನಾಶಕಗಳ ಬಳಕೆಯನ್ನು ಕಡಿಮೆ ಮಾಡುವ ಮೂಲಕ ಪರಿಸರ ಮಾಲಿನ್ಯ ತಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಸಾವಯವ ಕೃಷಿಯಿಂದ ಮಣ್ಣಿನಲ್ಲಿರುವ ಸೂಕ್ಷ್ಮಜೀವಿಗಳ ಚಟುವಟಿಕೆ ಹೆಚ್ಚುವುದರೊಂದಿಗೆ ಸಾವಯವ ಕಾರ್ಬನ್ ಪ್ರಮಾಣವೂ ವೃದ್ಧಿಯಾಗುತ್ತದೆ. ಇದರಿಂದ ಉತ್ತಮ ಗುಣಮಟ್ಟದ ಉತ್ಪಾದನೆ, ಆರೋಗ್ಯಕರ ಆಹಾರ ಹಾಗೂ ದೀರ್ಘಾವಧಿಯಲ್ಲಿ ಕೃಷಿ ವೆಚ್ಚದ ಇಳಿಕೆಗೆ ಸಹ ನೆರವಾಗುತ್ತದೆ ಎಂದು ವಿವರಿಸಿದರು.




ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಮಣ್ಣಿನಲ್ಲಿ ಶೇ.45ರಷ್ಟು ಖನಿಜಾಂಶ, ಶೇ.25ರಷ್ಟು ಗಾಳಿ, ಶೇ.25ರಷ್ಟು ನೀರು ಹಾಗೂ ಶೇ.5ರಷ್ಟು ಸಾವಯವ ಅಂಶಗಳಿದ್ದು, ಈ ಸಾವಯವ ಅಂಶಗಳೇ ಕೃಷಿಗೆ ಜೀವಾಳವಾಗಿವೆ ಎಂದರು.

ಭೂಮಿಯ ಮೇಲ್ಭಾಗದ ಒಂದು ಅಡಿ ಮಣ್ಣು ಮಾತ್ರ ಕೃಷಿಗೆ ಯೋಗ್ಯವಾಗಿದ್ದು, ಅದನ್ನು ಸಂರಕ್ಷಿಸುವುದು ರೈತರ ಜವಾಬ್ದಾರಿಯಾಗಿದೆ. ಹೆಚ್ಚಿನ ಇಳುವರಿ ಪಡೆಯುವ ಉದ್ದೇಶದಿಂದ ನಿರಂತರವಾಗಿ ರಾಸಾಯನಿಕ ಗೊಬ್ಬರ ಬಳಕೆ ಮಾಡಿದರೆ ಮಣ್ಣಿನ ಆರೋಗ್ಯ ಹದಗೆಡುತ್ತದೆ. ಮಣ್ಣು ಪರೀಕ್ಷೆಯ ವರದಿಯನ್ನು ಆಧರಿಸಿ ಶಿಫಾರಸು ಮಾಡಿದ ಪ್ರಮಾಣದಲ್ಲಿಯೇ ಗೊಬ್ಬರ ಬಳಕೆ ಮಾಡಬೇಕು ಎಂದು ಸಲಹೆ ನೀಡಿದರು.

ಕೃಷಿ ತ್ಯಾಜ್ಯ, ಎರೆಹುಳು ಗೊಬ್ಬರ, ಹಸಿರೆಲೆ ಗೊಬ್ಬರ, ಪಂಚಗವ್ಯ, ಜೀವಾಮೃತ, ಜೈವಿಕ ಗೊಬ್ಬರ ಹಾಗೂ ಬೆಳೆ ಹೊದಿಕೆಗಳ ಬಳಕೆಯೊಂದಿಗೆ ಸಮಗ್ರ ಪೋಷಕಾಂಶ ನಿರ್ವಹಣೆ ಅಳವಡಿಸಿಕೊಂಡರೆ ಮಾತ್ರ ಮಣ್ಣಿನ ಫಲವತ್ತತೆಯನ್ನು ಉಳಿಸಿಕೊಳ್ಳಲು ಸಾಧ್ಯ ಎಂದು ಹೇಳಿದರು.

> "ರಾಸಾಯನಿಕ ಗೊಬ್ಬರದ ಅತಿಬಳಕೆಯಿಂದ ಮಣ್ಣಿನ ಆರೋಗ್ಯ ಹದಗೆಡುತ್ತಿದೆ. ರೈತರು ಸಾವಯವ ಕೃಷಿಯತ್ತ ಮುಖ ಮಾಡಿದರೆ ಮಾತ್ರ ಭೂಮಿಯ ಫಲವತ್ತತೆ ಉಳಿಯಲಿದೆ."
>
> **– ಡಿ.ವಿ. ಸದಾನಂದಗೌಡ, ಮಾಜಿ ಮುಖ್ಯಮಂತ್ರಿ**

ಶಾಸಕ ಡಾ. ಚಂದ್ರು ಕೆ. ಲಮಾಣಿ ಮಾತನಾಡಿ, ರಾಸಾಯನಿಕ ಗೊಬ್ಬರಗಳ ಅತಿಯಾದ ಅಥವಾ ತಪ್ಪಾದ ಬಳಕೆಯಿಂದ ಮಣ್ಣಿನಲ್ಲಿರುವ ಸೂಕ್ಷ್ಮ ಪೋಷಕಾಂಶಗಳ ಸಮತೋಲನ ಹಾಳಾಗುತ್ತದೆ. ಜೊತೆಗೆ ಉಪಯುಕ್ತ ಬ್ಯಾಕ್ಟೀರಿಯಾ ಹಾಗೂ ಇತರ ಸೂಕ್ಷ್ಮಜೀವಿಗಳ ಸಂಖ್ಯೆಯೂ ಕಡಿಮೆಯಾಗುತ್ತದೆ. ಇದರಿಂದ ಭೂಮಿಯ ಗುಣಮಟ್ಟದ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎಸ್.ವಿ. ಸಂಕನೂರ, ಬಿಜೆಪಿ ಜಿಲ್ಲಾ ಅಧ್ಯಕ್ಷ ರಾಜು ಕುರಡಗಿ, ಫಕ್ಕೀರೇಶ ರಟ್ಟಿಹಳ್ಳಿ, ಬಸವರಾಜ ನಾವಿ, ಸುನೀಲ ಮಹಾಂತಶೆಟ್ಟರ, ಡಿ.ವೈ. ಹುನಗುಂದ, ಶಿವಪ್ರಕಾಶ ಮಹಾಜನಶೆಟ್ಟರ, ದೇವರಡ್ಡಿ ಅಗಸನಕೊಪ್ಪ, ಸರೋಜಮ್ಮ ಅಗಸನಕೊಪ್ಪ, ಸುರೇಶ ಕುಂಬಾರ, ತಿಪ್ಪಣ್ಣ ಕೊಂಚಿಗೇರಿ, ಜಾನು ಲಮಾಣಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸನ್ಮಾರ್ಗ ಕಾಲೇಜಿನಲ್ಲಿ ಪಾಲಕರ ಸಭೆ; ಸಿಇಟಿ-ನೀಟ್ ಸಿದ್ಧತೆ ಕುರಿತು ಮಾಹಿತಿ

# ವಿದ್ಯಾರ್ಥಿಗಳ ಯಶಸ್ಸಿಗೆ ಶಿಕ್ಷಕ-ಪಾಲಕರ ಸಮನ್ವಯ ಅಗತ್ಯ

**■ ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆ ಹಾಗೂ ಶೈಕ್ಷಣಿಕ ಸಾಧನೆಗೆ ಶಿಕ್ಷಕರು ಮತ್ತು ಪಾಲಕರ ನಡುವಿನ ಸಮನ್ವಯ ಅತ್ಯಂತ ಅಗತ್ಯವಾಗಿದೆ ಎಂದು ಸ್ಟುಡೆಂಟ್ಸ್ ಎಜ್ಯುಕೇಶನ್ ಸಂಸ್ಥೆಯ ಅಧ್ಯಕ್ಷ ಪ್ರೊ. ರಾಜೇಶ ಕುಲಕರ್ಣಿ ಹೇಳಿದರು.

ನಗರದ ಸ್ಟುಡೆಂಟ್ಸ್ ಎಜ್ಯುಕೇಶನ್ ಸಂಸ್ಥೆಯ ವಿಜ್ಞಾನ ಹಾಗೂ ವಾಣಿಜ್ಯ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ನಡೆದ ಪ್ರಸಕ್ತ ಶೈಕ್ಷಣಿಕ ಸಾಲಿನ ಪಾಲಕರ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಕಾಲೇಜಿನ ಮೇಲೆ ವಿಶ್ವಾಸವಿಟ್ಟು ತಮ್ಮ ಮಕ್ಕಳನ್ನು ಶಿಕ್ಷಣಕ್ಕಾಗಿ ಒಪ್ಪಿಸಿರುವ ಎಲ್ಲ ಪಾಲಕರಿಗೆ ಕೃತಜ್ಞತೆ ಸಲ್ಲಿಸಿದ ಅವರು, ಪದವಿ ಪೂರ್ವ ಹಂತವು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಪ್ರಮುಖ ಘಟ್ಟವಾಗಿದ್ದು, ಅವರಿಗೆ ಅಗತ್ಯವಾದ ಜ್ಞಾನ, ಕೌಶಲ್ಯ ಹಾಗೂ ಮೌಲ್ಯಗಳನ್ನು ನೀಡಲು ಸಂಸ್ಥೆ ಬದ್ಧವಾಗಿದೆ ಎಂದು ತಿಳಿಸಿದರು.

ಸಂಸ್ಥೆಯ ನಿರ್ದೇಶಕ ಹಾಗೂ ಭೌತಶಾಸ್ತ್ರ ಉಪನ್ಯಾಸಕರಾದ ಪ್ರೊ. ರೋಹಿತ್ ಒಡೆಯರ್ ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಯ ಜೊತೆಗೆ ಉತ್ತಮ ಮೌಲ್ಯಗಳನ್ನು ಅವರಲ್ಲಿ ಬೆಳೆಸುವುದು ಶಿಕ್ಷಣ ಸಂಸ್ಥೆಯ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ಶಿಕ್ಷಕರ ಪ್ರಯತ್ನದ ಜೊತೆಗೆ ಪಾಲಕರ ಸಹಭಾಗಿತ್ವವೂ ಅನಿವಾರ್ಯವಾಗಿದೆ ಎಂದು ಹೇಳಿದರು.




> "ವಿದ್ಯಾರ್ಥಿಯ ಯಶಸ್ಸು ಕೇವಲ ಶಿಕ್ಷಕರ ಅಥವಾ ಪಾಲಕರ ಜವಾಬ್ದಾರಿಯಲ್ಲ; ಇಬ್ಬರ ಸಮನ್ವಯ ಮತ್ತು ಸಹಕಾರದಿಂದಲೇ ಉತ್ತಮ ಭವಿಷ್ಯ ನಿರ್ಮಾಣ ಸಾಧ್ಯ"
>
> **– ಪ್ರೊ. ರಾಜೇಶ ಕುಲಕರ್ಣಿ, ಸ್ಟುಡೆಂಟ್ಸ್ ಎಜ್ಯುಕೇಶನ್ ಸಂಸ್ಥೆಯ ಅಧ್ಯಕ್ಷ**

ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ಪುನೀತ್ ದೇಶಪಾಂಡೆ ಸಮಾರೋಪ ಭಾಷಣದಲ್ಲಿ ಮಾತನಾಡಿ, ಸನ್ಮಾರ್ಗ ಶಿಕ್ಷಣ ಸಂಸ್ಥೆ ವಿದ್ಯಾರ್ಥಿಗಳಲ್ಲಿ ಶಿಸ್ತು, ಸನ್ನಡತೆ ಹಾಗೂ ಬೌದ್ಧಿಕ ಸಾಮರ್ಥ್ಯ ಬೆಳೆಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದೆ. ವಿದ್ಯಾರ್ಥಿಗಳ ಯಶಸ್ಸಿಗೆ ಪಾಲಕರು ಮತ್ತು ಶಿಕ್ಷಕರ ಸಹಸ್ಪಂದನೆ ಅಗತ್ಯವಾಗಿದೆ ಎಂದು ಹೇಳಿದರು. ಸಿಇಟಿ ಹಾಗೂ ನೀಟ್ ಪರೀಕ್ಷೆಗಳಿಗಾಗಿ ಮಹಾವಿದ್ಯಾಲಯ ಕೈಗೊಂಡಿರುವ ವಿಶೇಷ ಸಿದ್ಧತೆಗಳು, ತರಬೇತಿ ಕ್ರಮಗಳು ಹಾಗೂ ಇತ್ತೀಚೆಗೆ ಅಳವಡಿಸಿಕೊಂಡಿರುವ ಹೊಸ ಸಾಫ್ಟ್‌ವೇರ್‌ನ ಉಪಯೋಗಗಳ ಕುರಿತು ಪಾಲಕರಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಪ್ರಸಕ್ತ ಸಾಲಿನ ಸಿಇಟಿ ಪರೀಕ್ಷೆಯಲ್ಲಿ ಗದಗ ಜಿಲ್ಲೆಯಲ್ಲಿ ಅತ್ಯುತ್ತಮ ರ್‍ಯಾಂಕ್ ಗಳಿಸಿ ಸಾಧನೆ ಮಾಡಿದ ವಿದ್ಯಾರ್ಥಿಗಳಾದ ರಜತ್ ತೇಂಬದಮನಿ, ಕಿರಣ ಹಿರೇಮಠ, ಶಿವರಾಮಚೈತನ್ಯ ಕುಲಕರ್ಣಿ ಹಾಗೂ ಅನನ್ಯ ಜೋಶಿ ಅವರನ್ನು ಅಭಿನಂದಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ನಿರ್ದೇಶಕರಾದ ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ್, ಮಹಾವಿದ್ಯಾಲಯದ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಮತ್ತು ಪಾಲಕರು ಉಪಸ್ಥಿತರಿದ್ದರು.

ಪ್ರೊ. ಮುರಳೀಧರ ಸಂಕನೂರ ಕಾರ್ಯಕ್ರಮ ನಿರೂಪಿಸಿ ಸ್ವಾಗತಿಸಿದರು. ಪ್ರೊ. ಪರಶುರಾಮ ಕೊಟ್ನಿಕಲ್ ವಂದಿಸಿದರು. ಸಭೆಯಲ್ಲಿ ಪಾಲಕರು ತಮ್ಮ ಸಲಹೆ ಮತ್ತು ಸೂಚನೆಗಳನ್ನು ಮುಕ್ತವಾಗಿ ಹಂಚಿಕೊಂಡರು.

## ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯಲ್ಲಿ ಜಾಗೃತಿ

# ಬಾಲ್ಯದ ಮೇಲೆ ಕಾರ್ಮಿಕತೆಯ ಕರಿನೆರಳು ಬೇಡ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ಅಂಗವಾಗಿ ಪಟ್ಟಣದ ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯಲ್ಲಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ವಿದ್ಯಾರ್ಥಿನಿ ಕುಮಾರಿ ಭಾವನಾ ಗೆದಗೇರಿ ಅವರು ಪ್ರಾರ್ಥನಾ ಸಭೆಯಲ್ಲಿ ದಿನಾಚರಣೆಯ ಮಹತ್ವ ಕುರಿತು ಮಾತನಾಡಿ, ಬಾಲಕಾರ್ಮಿಕ ಪದ್ಧತಿ ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಭವಿಷ್ಯದ ಮೇಲೆ ಗಂಭೀರ ದುಷ್ಪರಿಣಾಮ ಬೀರುತ್ತದೆ ಎಂದು ತಿಳಿಸಿದರು. ಪ್ರತಿಯೊಬ್ಬ ಮಗುವಿಗೂ ಶಿಕ್ಷಣ ಪಡೆಯುವ ಹಾಗೂ ಸಂತೋಷದಿಂದ ಬದುಕುವ ಮೂಲಭೂತ ಹಕ್ಕು ಇದೆ. ಬಾಲಕಾರ್ಮಿಕ ಪದ್ಧತಿ ಮಕ್ಕಳ ಬಾಲ್ಯವನ್ನು ಕಸಿದುಕೊಳ್ಳುವ ಸಾಮಾಜಿಕ ಪಿಡುಗಾಗಿದ್ದು, ಅದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಬಾಲಕಾರ್ಮಿಕತೆ ನಿರ್ಮೂಲನೆಗೆ ಸರ್ಕಾರ, ಪೋಷಕರು, ಶಿಕ್ಷಕರು ಹಾಗೂ ಸಮಾಜದ ಎಲ್ಲ ವರ್ಗದ ಜನರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕಿದೆ. ಶಾಲೆಯಿಂದ ಹೊರಗುಳಿಯುವ ಯಾವುದೇ ಮಗು ಕಾರ್ಮಿಕತೆಯ ಬಲೆಗೆ ಬೀಳದಂತೆ ಎಚ್ಚರ ವಹಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ಬಾಲ ಕಾರ್ಮಿಕ ಪದ್ಧತಿ ವಿರೋಧದ ಪ್ರತಿಜ್ಞಾವಿಧಿಯನ್ನು ಬೋಧಿಸಿ ಪ್ರಮಾಣ ವಚನ ಸ್ವೀಕರಿಸಲಾಯಿತು. ಬಾಲಕಾರ್ಮಿಕತೆ ನಿರ್ಮೂಲನೆಗೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬೇಕು ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆಗೆ ಬದ್ಧರಾಗಿರಬೇಕು ಎಂಬ ಸಂದೇಶ ನೀಡಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ, ಶಾಲೆಯ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಬಾಲಕಾರ್ಮಿಕತೆ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಸಂಕಲ್ಪ ಮಾಡಬೇಕೆಂದು ಕರೆ ನೀಡಲಾಯಿತು.

# 'ಮಿಸ್ಟರ್ ಕ್ಲೀನ್' ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡಲೇಬೇಕು

▶▶ ಮೊದಲನೇ ಪುಟದಿಂದ

ಗದಗ ಜಿಲ್ಲೆಯ ಸವಿತಾ ಸಮಾಜದ ಹಿರಿಯರು ಹಾಗೂ ಎಚ್.ಕೆ. ಪಾಟೀಲ ಅಭಿಮಾನಿ ಬಳಗದ ವತಿಯಿಂದ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಿಲ್ಲಾ ಸವಿತಾ ಸಮಾಜದ ಮುಖಂಡ ದೀಪಕ್ ರಾಯಚೂರು, ಕಳೆದ ನಾಲ್ಕು ದಶಕಗಳಿಂದ ಕಳಂಕರಹಿತ ರಾಜಕಾರಣಿಯಾಗಿ ಗುರುತಿಸಿಕೊಂಡಿರುವ ಎಚ್.ಕೆ. ಪಾಟೀಲರು ಅಧಿಕಾರ ಸಿಕ್ಕಾಗಲೆಲ್ಲ ಪಾರದರ್ಶಕ ಆಡಳಿತ ಹಾಗೂ ಜನಸೇವೆಯ ಮೂಲಕ ಜನಮನ ಗೆದ್ದಿದ್ದಾರೆ. ಇಂತಹ "ಮಿಸ್ಟರ್ ಕ್ಲೀನ್" ನಾಯಕರಿಗೆ ನೂತನ ಸಚಿವ ಸಂಪುಟದಲ್ಲಿ ಸ್ಥಾನ ಸಿಗದಿರುವುದು ಗದಗ ಜಿಲ್ಲೆ ಮಾತ್ರವಲ್ಲದೆ ಇಡೀ ಉತ್ತರ ಕರ್ನಾಟಕದ ಜನತೆಗೆ ನೋವುಂಟು ಮಾಡಿದೆ ಎಂದು ಹೇಳಿದರು.

ಗದಗ ನಗರದಲ್ಲಿ ಎರಡು ರೂಪಾಯಿಗೆ 20 ಲೀಟರ್ ಶುದ್ಧ ಕುಡಿಯುವ ನೀರು ದೊರೆಯುವಂತೆ ಯೋಜನೆ ರೂಪಿಸಿ ಜಾರಿಗೊಳಿಸಿದ ಭಗೀರಥ ಎಚ್.ಕೆ. ಪಾಟೀಲರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾಗಿದ್ದ ವೇಳೆ ದೇಶದಲ್ಲೇ ಮಾದರಿಯಾಗುವ ಗ್ರಾಮೀಣ ಅಭಿವೃದ್ಧಿ ವಿಶ್ವವಿದ್ಯಾಲಯ ಸ್ಥಾಪನೆಗೆ ಕಾರಣಕರ್ತರಾಗಿದ್ದಾರೆ.

ಮಳೆ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದಾಗ ಮೋಡ ಬಿತ್ತನೆ ಮೂಲಕ ಕೃತಕ ಮಳೆಯ ಪ್ರಯತ್ನ, ಉತ್ತರ ಕರ್ನಾಟಕದ ಜನರಿಗೆ ನ್ಯಾಯ ದೊರಕುವ ನಿಟ್ಟಿನಲ್ಲಿ ಸಂಚಾರಿ ಪೀಠಗಳ ಸ್ಥಾಪನೆ ಸೇರಿದಂತೆ ಅನೇಕ ದೂರದೃಷ್ಟಿಯ ಯೋಜನೆಗಳನ್ನು ಜಾರಿಗೊಳಿಸಿದ್ದಾರೆ ಎಂದು ಶ್ಲಾಘಿಸಿದರು.

ವಯೋವೃದ್ಧರ ಕಣ್ಣಿನ ತಪಾಸಣೆ, ಉಚಿತ ಕಣ್ಣಿನ ಶಸ್ತ್ರಚಿಕಿತ್ಸೆ, ಕನ್ನಡಕ ವಿತರಣೆ, ಅಂಗವಿಕಲರಿಗೆ ಕೃತಕ ಕಾಲುಗಳ ವಿತರಣೆ, ಹೃದಯ ಹಾಗೂ ಕಿಡ್ನಿ ಸಂಬಂಧಿತ ಗಂಭೀರ ಕಾಯಿಲೆಗಳಿಗೆ ಉಚಿತ ಚಿಕಿತ್ಸೆಯಂತಹ ಮಾನವೀಯ ಕಾರ್ಯಗಳ ಮೂಲಕ ಜನಸೇವೆಯನ್ನು ಜೀವನ ಧ್ಯೇಯವನ್ನಾಗಿಸಿಕೊಂಡಿರುವ ಎಚ್.ಕೆ. ಪಾಟೀಲರಿಗೆ ಉಪಮುಖ್ಯಮಂತ್ರಿ ಹುದ್ದೆ ನೀಡುವ ಮೂಲಕ ರಾಜ್ಯಕ್ಕೆ ಅವರ ಅನುಭವದ ಲಾಭ ದೊರಕುವಂತೆ ಮಾಡಬೇಕು ಎಂದು ಅವರು ಆಗ್ರಹಿಸಿದರು.

ಸಚಿವ ಸ್ಥಾನ ನೀಡುವ ಬದಲು ಸಭಾಧ್ಯಕ್ಷ ಸ್ಥಾನ ನೀಡಿ ಅವರ ರಾಜಕೀಯ ಸಾಮರ್ಥ್ಯವನ್ನು ಸೀಮಿತಗೊಳಿಸುವ ಪ್ರಯತ್ನ ಮಾಡಬಾರದು. ಅಭಿವೃದ್ಧಿ ಮತ್ತು ಪಾರದರ್ಶಕ ಆಡಳಿತದ ಪ್ರತೀಕವಾಗಿರುವ ಎಚ್.ಕೆ. ಪಾಟೀಲರಿಗೆ ಸರ್ಕಾರದಲ್ಲಿ ಪ್ರಮುಖ ಜವಾಬ್ದಾರಿ ನೀಡಬೇಕು ಎಂದು ವಿವಿಧ ಸಂಘಟನೆಗಳ ಮುಖಂಡರು ಒಕ್ಕೊರಲಿನಿಂದ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಜು ಗೌಡರ, ವೆಂಕಟೇಶ್ ರಾಂಪುರ, ಗಂಗಣ್ಣ ಗೌಡರ್, ಪಾಂಡಪ್ಪ ರಾಂಪುರ, ಪರಶುರಾಮ್ ಕೋಟೆಕಲ್, ಪಂಪಣ್ಣ ರಾಯಚೂರು, ಮಂಜುನಾಥ್ ಬಯಲಗುಡ್ಡ, ವೆಂಕಟೇಶ್ ಬಯಲಗುಡ್ಡ, ಮುರಳಿ ವಲ್ಲೂರ್, ರವಿಕುಮಾರ್ ಹಡಪದ್, ರಾಘವೇಂದ್ರ ರಾಂಪುರ, ರಾಘವೇಂದ್ರ ಬಯಲಗುಡ್ಡ, ಶ್ರೀನಿವಾಸ್ ರಾಂಪುರ, ಜಗದೀಶ್ ರಾಂಪುರ, ಪರಶುರಾಮ್ ಆದೋನಿ, ಮಂಜುನಾಥ್ ಕಡಬೂರ್ ಸೇರಿದಂತೆ ವಿವಿಧ ಸಮಾಜಗಳ ಮುಖಂಡರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.


# ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನಕ್ಕಾಗಿ ಇಂದು ಬೆಂಗಳೂರಿನವರೆಗೆ ಪಾದಯಾತ್ರೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ರೋಣ ಕ್ಷೇತ್ರದ ಶಾಸಕರಾದ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಆಗ್ರಹಿಸಿ ಅವರ ಅಭಿಮಾನಿ ಬಳಗದ ವತಿಯಿಂದ ತುಮಕೂರಿನಿಂದ ಬೆಂಗಳೂರಿನವರೆಗೆ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ.

ತುಮಕೂರಿನ ಸಿದ್ಧಗಂಗಾ ಮಠದಿಂದ ಮಂಗಳವಾರ ಆರಂಭವಾಗಲಿರುವ ಪಾದಯಾತ್ರೆಯು ಎರಡು ದಿನಗಳ ಕಾಲ ನಡೆಯಲಿದ್ದು, ಜೂನ್ 17 ಮತ್ತು 18ರಂದು ನೂರಾರು ಅಭಿಮಾನಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಲಿದ್ದಾರೆ. ಕಾಂಗ್ರೆಸ್ ಪಕ್ಷದ ಹೈ ಕಮಾಂಡ್ ಗಮನ ಸೆಳೆದು ಜಿ.ಎಸ್. ಪಾಟೀಲ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ಕಲ್ಪಿಸಬೇಕು ಎಂಬುದು ಪಾದಯಾತ್ರೆಯ ಪ್ರಮುಖ ಉದ್ದೇಶವಾಗಿದೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ಕಾಂಗ್ರೆಸ್ ಪಕ್ಷದ ಯುವ ಮುಖಂಡ ಹಾಗೂ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ, ಗದಗ ಜಿಲ್ಲೆಯ ಅಭಿವೃದ್ಧಿಗೆ ಜಿ.ಎಸ್. ಪಾಟೀಲ ಅವರ ಕೊಡುಗೆ ಅಪಾರವಾಗಿದೆ. ಜನಪರ ಕಾಳಜಿ ಹಾಗೂ ಅಭಿವೃದ್ಧಿ ದೃಷ್ಟಿಕೋನ ಹೊಂದಿರುವ ಅವರಿಗೆ ಸಚಿವ ಸ್ಥಾನ ನೀಡುವುದು ರಾಜ್ಯದ ಹಿತದೃಷ್ಟಿಯಿಂದ ಅಗತ್ಯವಾಗಿದೆ ಎಂದು ಹೇಳಿದರು.




> "ಗದಗ ಜಿಲ್ಲೆಯ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿರುವ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡುವುದು ಜನರ ಆಶಯವಾಗಿದೆ. ಈ ಬೇಡಿಕೆಯನ್ನು ಕಾಂಗ್ರೆಸ್ ಪಕ್ಷದ ಹೈ ಕಮಾಂಡ್ ಗಮನಕ್ಕೆ ತರಲು ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ."
>
> **– ಯಲ್ಲಪ್ಪ ಎಚ್. ಬಾಬರಿ**
> ಕಾಂಗ್ರೆಸ್ ಪಕ್ಷದ ಯುವ ಮುಖಂಡ ಹಾಗೂ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷರು

ಗದಗ ಜಿಲ್ಲೆಯ ತಿಮ್ಮಾಪೂರ ಗ್ರಾಮ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಿಂದ ನೂರಾರು ಕಾರ್ಯಕರ್ತರು ಹಾಗೂ ಅಭಿಮಾನಿಗಳು ಪಾದಯಾತ್ರೆಯಲ್ಲಿ ಪಾಲ್ಗೊಳ್ಳುತ್ತಿದ್ದು, ಸಿದ್ಧಗಂಗಾ ಮಠದ ಶಿವಕುಮಾರ್ ಶ್ರೀಗಳ ಗದ್ದುಗೆಯ ಆಶೀರ್ವಾದ ಪಡೆದು ಪಾದಯಾತ್ರೆ ಆರಂಭವಾಗಲಿದೆ. ಪಾದಯಾತ್ರೆಯು ಫ್ರೀಡಂ ಪಾರ್ಕ್ ನಲ್ಲಿ ಸಮಾರೋಪಗೊಳ್ಳಲಿದ್ದು, ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ, ಸೇರಿದಂತೆ ಕಾಂಗ್ರೆಸ್ ಹೈ ಕಮಾಂಡ್ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ಉತ್ತರ ಕರ್ನಾಟಕದ ಆಶಯಕ್ಕೆ ಸ್ಪಂದಿಸಬೇಕು ಎಂದು ಆಗ್ರಹಿಸಿದರು.

ಎಂಆರ್‌ಪಿಗಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡಿದರೆ ಕಠಿಣ ಕ್ರಮ; ಬಿಲ್ ಪಡೆದು ಖರೀದಿಸಲು ಸೂಚನೆ

# ಗೊಬ್ಬರ ಖರೀದಿಸುವ ರೈತರಿಗೆ ಎಚ್ಚರಿಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ 2026–27ನೇ ಸಾಲಿನ ಮುಂಗಾರು ಹಂಗಾಮಿಗೆ ರಸಗೊಬ್ಬರಗಳ ಪೂರೈಕೆ ಮತ್ತು ಮಾರಾಟಕ್ಕೆ ಸಂಬಂಧಿಸಿದಂತೆ ರೈತರು ಎಚ್ಚರಿಕೆಯಿಂದ ವ್ಯವಹರಿಸುವಂತೆ ಕೃಷಿ ಇಲಾಖೆ ಸೂಚನೆ ನೀಡಿದೆ.

ಕೇಂದ್ರ ಸರ್ಕಾರವು ಪೋಷಕಾಂಶ ಆಧಾರಿತ ಸಬ್ಸಿಡಿ (ಎನ್‌ಬಿಎಸ್) ಯೋಜನೆಯಡಿ ರಸಗೊಬ್ಬರಗಳ ದರ ನಿಗದಿಪಡಿಸಿದ್ದು, ರೈತರಿಗೆ ಅಧಿಕೃತ ಮಾರುಕಟ್ಟೆ ದರ (ಎಂಆರ್‌ಪಿ) ಕುರಿತು ನಿಖರ ಮಾಹಿತಿ ನೀಡಲು ಕ್ರಮ ಕೈಗೊಳ್ಳಲಾಗಿದೆ. ನಿಗದಿತ ದರಕ್ಕಿಂತ ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ಮಾಡುವುದನ್ನು ತಡೆಯಲು ಇಲಾಖೆಯಿಂದ ನಿಗಾ ವಹಿಸಲಾಗಿದೆ.

ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ವಸ್ತುಗಳ ಬೆಲೆ ಏರಿಕೆಯಾಗಿದ್ದರೂ ರೈತರ ಮೇಲಿನ ಆರ್ಥಿಕ ಹೊರೆ ಕಡಿಮೆ ಮಾಡಲು ಡಿಎಪಿ ಹಾಗೂ ಇತರೆ ಕಾಂಪ್ಲೆಕ್ಸ್ ರಸಗೊಬ್ಬರಗಳ ಮೇಲಿನ ಹೆಚ್ಚುವರಿ ಸಬ್ಸಿಡಿಯನ್ನು ಕೇಂದ್ರ ಸರ್ಕಾರ ಮುಂದುವರಿಸಿದೆ. ಯಾವುದೇ ರಸಗೊಬ್ಬರ ಮಾರಾಟಗಾರರು ಅಥವಾ ಸಹಕಾರ ಸಂಘಗಳು ಸರ್ಕಾರ ನಿಗದಿಪಡಿಸಿದ ಗರಿಷ್ಠ ಮಾರಾಟ ದರಕ್ಕಿಂತ ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ಮಾಡಿದರೆ, ರಸಗೊಬ್ಬರ ನಿಯಂತ್ರಣ ಕಾಯ್ದೆಯಡಿ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಇಲಾಖೆ ಎಚ್ಚರಿಸಿದೆ.

ಸಾಂಪ್ರದಾಯಿಕ ಹರಳು ರೂಪದ ರಸಗೊಬ್ಬರಗಳ ಜೊತೆಗೆ ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿಎಪಿ ಬಳಕೆಯನ್ನು ಉತ್ತೇಜಿಸಲಾಗುತ್ತಿದ್ದು, ರೈತರು ಈ ರಸಗೊಬ್ಬರಗಳ ಬಳಕೆಯತ್ತ ಗಮನ ಹರಿಸಬೇಕು ಎಂದು ಸಲಹೆ ನೀಡಲಾಗಿದೆ. ರೈತರು ಕೇವಲ ಅಧಿಕೃತ ರಸಗೊಬ್ಬರ ಮಾರಾಟಗಾರರಿಂದಲೇ ಗೊಬ್ಬರ ಖರೀದಿಸಬೇಕು. ಖರೀದಿ ವೇಳೆ ಕಡ್ಡಾಯವಾಗಿ ಬಿಲ್ ಪಡೆದುಕೊಳ್ಳಬೇಕು ಹಾಗೂ ಚೀಲದ ಮೇಲಿರುವ ಗರಿಷ್ಠ ಮಾರಾಟ ದರವನ್ನು ಪರಿಶೀಲಿಸಿ ನಂತರವೇ ಖರೀದಿ ಮಾಡಬೇಕು ಎಂದು ಗದಗ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಂಚಮಸಾಲಿ ಸಮಾಜದವರು ಸಂಸ್ಕಾರವಂತ ಪೀಳಿಗೆ ನಿರ್ಮಾಣಕ್ಕೆ ಮುಂದಾಗಲಿ: ಶ್ರೀ ಚನ್ನವೀರ ಮಹಾಸ್ವಾಮಿಗಳು

# ಮಕ್ಕಳಿಗೆ ಆಸ್ತಿ ಬೇಡ, ಉತ್ತಮ ಶಿಕ್ಷಣ ಕೊಡಿ

■ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ

ನಾವು ಗಳಿಸಿದ ಆಸ್ತಿ, ಅಂತಸ್ತು ಮತ್ತು ಸಂಪತ್ತು ಶಾಶ್ವತವಲ್ಲ. ಆದರೆ ಶಿಕ್ಷಣ, ಸಂಸ್ಕಾರ ಹಾಗೂ ವ್ಯಕ್ತಿತ್ವ ಮಾತ್ರ ಜೀವನಪರ್ಯಂತ ಉಳಿಯುವ ನಿಜವಾದ ಸಂಪತ್ತಾಗಿದ್ದು, ಪಂಚಮಸಾಲಿ ಸಮಾಜದವರು ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣದೊಂದಿಗೆ ಉತ್ತಮ ಸಂಸ್ಕಾರ ನೀಡಬೇಕು ಎಂದು ಹೂವಿನಶಿಗ್ಲಿ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ತಾಲೂಕಿನ ಶಿಗ್ಲಿ ಗ್ರಾಮದ ಶಾಖಾಂಬರಿ ಸಮುದಾಯ ಭವನದಲ್ಲಿ ವೀರರಾಣಿ ಕಿತ್ತೂರ ಚನ್ನಮ್ಮ ವಿವಿಧೋದ್ದೇಶಗಳ ಸಂಘದ ವತಿಯಿಂದ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಹಾಗೂ ಪಂಚಮಸಾಲಿ ಸಮಾಜದ ನೌಕರರ ಸಂಘ ಉದ್ಘಾಟನಾ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಮಠಗಳು ನಡೆಸುತ್ತಿರುವ ತ್ರಿವಿಧ ದಾಸೋಹ ಸೇವೆಯಲ್ಲಿ ಪಂಚಮಸಾಲಿ ಸಮಾಜದ ಕೊಡುಗೆ ಸ್ಮರಣೀಯವಾಗಿದೆ. ಸಮಾಜದಿಂದ ನಾವು ಪಡೆದಿರುವುದನ್ನು ಮರಳಿ ಸಮಾಜಕ್ಕೆ ನೀಡುವ




ಮನೋಭಾವ ಪ್ರತಿಯೊಬ್ಬರಲ್ಲೂ ಇರಬೇಕು. ಹೆತ್ತವರು, ಗುರುಗಳು ಹಾಗೂ ಹುಟ್ಟಿದ ನೆಲದ ಋಣ ತೀರಿಸುವ ಮನೋಧರ್ಮ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಶಿಗ್ಲಿ ಗ್ರಾಮ ಘಟಕದ ಅಧ್ಯಕ್ಷ ಶಂಕರ ಎಂ. ರಾಗಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಪಂಚಮಸಾಲಿ ಸಮಾಜ ಸ್ವಾಭಿಮಾನ, ಸಂಘಟನೆ, ಸ್ವಾವಲಂಬನೆ, ಸಹಕಾರ ಮತ್ತು ಸಹಬಾಳ್ವೆಯ ತತ್ವಗಳೊಂದಿಗೆ ಇತರ ಸಮಾಜಗಳೊಂದಿಗೆ ಸೌಹಾರ್ದದಿಂದ ಬದುಕಬೇಕು ಎಂದು ಹೇಳಿದರು.

ಜಿಲ್ಲಾ ಅಧ್ಯಕ್ಷ ಈರಣ್ಣ ಕರಿಬಿಷ್ಟಿ ಹಾಗೂ ತಾಲೂಕು ಅಧ್ಯಕ್ಷ ಮಂಜುನಾಥ ಮಾಗಡಿ ಮಾತನಾಡಿ, ಸಮಾಜ ನಮಗೆ ಏನು ಮಾಡಿದೆ ಎನ್ನುವುದಕ್ಕಿಂತ ಸಮಾಜಕ್ಕಾಗಿ ನಾವು ಏನು ಮಾಡಿದ್ದೇವೆ ಎಂಬ ಆತ್ಮಾವಲೋಕನ ಅಗತ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ವಿವಿಧ ಕ್ಷೇತ್ರಗಳಲ್ಲಿ

> "ಆಸ್ತಿ-ಸಂಪತ್ತು ಉಳಿಯುವುದಿಲ್ಲ; ಶಿಕ್ಷಣ, ಸಂಸ್ಕಾರ ಮತ್ತು ವ್ಯಕ್ತಿತ್ವ ಮಾತ್ರ ಮನುಷ್ಯನ ನಿಜವಾದ ಗುರುತಾಗಿ ಉಳಿಯುತ್ತದೆ."
> – ಹೂವಿನಶಿಗ್ಲಿ ಶ್ರೀ ಚನ್ನವೀರ ಮಹಾಸ್ವಾಮಿಗಳು

ಸೇವೆ ಸಲ್ಲಿಸಿದ ಸಾಧಕರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಪಂಚಮಸಾಲಿ ಸಮಾಜದ ನೌಕರರ ಸಂಘವನ್ನು ಅಧಿಕೃತವಾಗಿ ಉದ್ಘಾಟಿಸಲಾಯಿತು.ಜಿಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ರಾಜ್ಯ ಸಂಘಟನೆಯ ಎಸ್.ಬಿ. ಡಾಣಗಲ್ ಹಾಗೂ ಶಿರಹಟ್ಟಿ ತಾಲೂಕು ಅಧ್ಯಕ್ಷ ಬಸವರಾಜ ತುಳಿ ಮಾತನಾಡಿದರು.

ಡಿ.ವೈ. ಹುನಗುಂದ, ಶಿವಪ್ಪ ಕೆಸರಳ್ಳಿ, ವೀರಣ್ಣ ಅಕ್ಕೂರ, ಪ್ರವೀಣ ಕಾಳಪ್ಪನವರ, ಎ.ಬಿ. ಕರ್ಜೆಕಣ್ಣವರ, ಸಿ.ಎನ್. ತೋಟದ, ಸುರೇಶ ಗೋದಿ, ಎಸ್.ಎನ್. ಯಲಿಗಾರ, ಎಂ.ಎನ್. ಹುನಗುಂದ, ಎಸ್.ಎಂ. ಬಾಳಿಕಾಯಿ, ಎಂ.ಪಿ. ಬಳಿಗಾರ, ಸುರೇಶ ಹತ್ತಿಕಾಳ ಸೇರಿದಂತೆ ಸಮಾಜದ ಹಿರಿಯರು ಉಪಸ್ಥಿತರಿದ್ದರು.

ಸಚಿವ ಸ್ಥಾನ ನೀಡದಿದ್ದರೆ ರಾಜ್ಯಾದ್ಯಂತ ಹೋರಾಟದ ಎಚ್ಚರಿಕೆ; ರೋಣ ಕ್ಷೇತ್ರದ ಅಭಿವೃದ್ಧಿಗೆ ಸಚಿವ ಸ್ಥಾನ ಅಗತ್ಯವೆಂದ ಯುವ ಮುಖಂಡರು

# ಜಿ.ಎಸ್.ಪಿಗೆ ಸಚಿವ ಸ್ಥಾನಕ್ಕೆ ಯುವಕರ ಪಟ್ಟು

■ವಿಜಯಸಾಕ್ಷಿ ಸುದ್ದಿ, ಡಂಬಳ

ರೋಣ ವಿಧಾನಸಭಾ ಕ್ಷೇತ್ರದ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಜಿ.ಎಸ್. ಪಾಟೀಲ ಅವರು ಗದಗ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಪಡಿಸುವುದರ ಜೊತೆಗೆ ಕ್ಷೇತ್ರದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಇಂತಹ ಜನಪರ ನಾಯಕರಿಗೆ ಸಚಿವ ಸ್ಥಾನ ನೀಡಬೇಕು. ಇಲ್ಲದಿದ್ದರೆ ಕಾಂಗ್ರೆಸ್ ಯುವಕರ ನೇತೃತ್ವದಲ್ಲಿ ದೊಡ್ಡ ಪ್ರಮಾಣದ ಹೋರಾಟ ನಡೆಸಲಾಗುವುದು ಎಂದು ಯುವ ಕಾಂಗ್ರೆಸ್ ಮುಖಂಡ ವೆಂಕಟೇಶ ಗದಗಿನ ಎಚ್ಚರಿಸಿದರು.

ಡಂಬಳದ ಐತಿಹಾಸಿಕ ಪ್ರವಾಸಿ ಮಂದಿರದಲ್ಲಿ ಯುವ ಕಾಂಗ್ರೆಸ್ ವತಿಯಿಂದ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಂಗಟಾಲೂರು ಏತ ನೀರಾವರಿ ಯೋಜನೆಯ



ಮೂಲಕ ಕೆರೆಗಳನ್ನು ತುಂಬಿಸಿ ರೈತರ ಬದು-ಕಿಗೆ ಆಶಾಕಿರಣವಾಗಿರುವ ಜಿ.ಎಸ್. ಪಾಟೀಲರು ಕ್ಷೇತ್ರದ ಅಭಿವೃದ್ಧಿಗೆ ನಿರಂತರ ಶ್ರಮಿಸಿದ್ದಾರೆ. ಡಂಬಳದಲ್ಲಿ ತೋಟಗಾರಿಕಾ ಕಾಲೇಜು ಸ್ಥಾಪನೆ ಸೇರಿದಂತೆ ಹಲವಾರು ಅಭಿವೃದ್ಧಿ ಕಾರ್ಯಗಳಿಗೆ ಮುಂಚೂಣಿಯಲ್ಲಿದ್ದಾರೆ. ಆದ್ದರಿಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಎಂದು

> "ರೈತರು, ಬಡವರು ಮತ್ತು ಸಾಮಾನ್ಯ ಜನರ ಪರವಾಗಿ ನಿರಂತರವಾಗಿ ಹೋರಾಟ ನಡೆಸಿರುವ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡುವುದು ಕಾಂಗ್ರೆಸ್ ಹೈಕಮಾಂಡ್‌ನ ನೈತಿಕ ಹೊಣೆಗಾರಿಕೆಯಾಗಿದೆ. ಸಚಿವ ಸ್ಥಾನ ನೀಡದಿದ್ದರೆ ಯುವ ಕಾಂಗ್ರೆಸ್ ನೇತೃತ್ವದಲ್ಲಿ ಹೋರಾಟ ತೀವ್ರಗೊಳಿಸಲಾಗುವುದು."
> – ವೆಂಕಟೇಶ ಗದಗಿನ
> ಯುವ ಕಾಂಗ್ರೆಸ್ ಮುಖಂಡರು

ಒತ್ತಾಯಿಸಿದರು.

ಯುವ ಕಾಂಗ್ರೆಸ್ ಮುಖಂಡ ಪ್ರಕಾಶ ಮೇಗೂರ ಮಾತನಾಡಿ, ರೋಣಕ್ಕೆ ಭೇಟಿ ನೀಡಿದ್ದ ವೇಳೆ ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ ಅವರು ಜಿ.ಎಸ್. ಪಾಟೀಲರು ಸಚಿವ ಸ್ಥಾನಕ್ಕೆ ಅರ್ಹರು ಎಂದು ಹೇಳಿದ್ದರು. ಆ ಭರವಸೆಯನ್ನು ಇದೀಗ ಈಡೇರಿಸುವ ಸಮಯ ಬಂದಿದೆ. ರೈತರು, ಬಡವರು ಹಾಗೂ ಕಾರ್ಮಿಕರ ಪರವಾಗಿ ನಿರಂತರವಾಗಿ ಕೆಲಸ ಮಾಡಿದ ನಾಯಕನಿಗೆ ಸಚಿವ ಸ್ಥಾನ ನೀಡುವುದರಿಂದ ಕಾಂಗ್ರೆಸ್ ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ಮೂಡಲಿದೆ ಎಂದು ಹೇಳಿದರು.

ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡದಿದ್ದರೆ ಕಾಂಗ್ರೆಸ್ ಪಕ್ಷದ ಅನೇಕ ಯುವ ಕಾರ್ಯಕರ್ತರು ರಾಜೀನಾಮೆ ನೀಡುವ ಪರಿಸ್ಥಿತಿ ನಿರ್ಮಾಣವಾಗಬಹುದು ಎಂದು ಎಚ್ಚರಿಸಿದ ಅವರು, ಮುಂಬರುವ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳ ದೃಷ್ಟಿಯಿಂದಲೂ ಅವರಿಗೆ ಸಚಿವ ಸ್ಥಾನ ನೀಡುವುದು ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಯುವ ಕಾಂಗ್ರೆಸ್ ಸದಸ್ಯರಾದ ಆದಿತ್ಯ ಗದಗಿನ ಹಾಗೂ ಆಶಿಫ್ ತಾಂಬೋಟಿ ಮಾತನಾಡಿ, ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಜಿ.ಎಸ್. ಪಾಟೀಲರು ಯಾವುದೇ ಕಪ್ಪು ಚುಕ್ಕೆ ಇಲ್ಲದ ರಾಜಕೀಯ ಜೀವನ ನಡೆಸಿದ್ದಾರೆ. ಕೋವಿಡ್ ಅವಧಿಯಲ್ಲಿ ಜನರ ಸಂಕಷ್ಟಕ್ಕೆ ಸ್ಪಂದಿಸಿದ ಮಾನವೀಯ ನಾಯಕನಾಗಿ ಗುರುತಿಸಿಕೊಂಡಿದ್ದಾರೆ. ಕಾಂಗ್ರೆಸ್ ಹೈಕಮಾಂಡ್ ಅವರ ಸೇವೆಯನ್ನು ಪರಿಗಣಿಸಿ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಯುವ ಮುಖಂಡ ಗೋಪಾಲ ಗದಗಿನ ಮಾತನಾಡಿ, 25 ಸಾವಿರಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಿರುವುದು ಜಿ.ಎಸ್. ಪಾಟೀಲರ ಜನಪ್ರಿಯತೆಗೆ ಸಾಕ್ಷಿಯಾಗಿದೆ. ಈ ಹಿಂದೆ ನೀಡಿದ್ದ ಭರವಸೆಯಂತೆ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಯುವ ಮುಖಂಡರಾದ ಭರಮಪ್ಪ ಮಂಗೋಜಿ, ಬುಡ್ನೇಸಾಬ ಜಲಾಲನವರ, ಮಂಜುನಾಥ ನರಗುಂದ, ಯಾಸೀನ್ ತಾಂಬೋಟಿ, ಶ್ರೀಕಾಂತ ಸಿರಿಗೇರಿ, ಮನ್ಸೂರಲಿ ಸುಂಕದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅತ್ಯುತ್ತಮ ವಾದ ಪತ್ರ ಪ್ರಶಸ್ತಿಯೂ ಮುಡಿಗೇರಿಸಿಕೊಂಡ ಕಾನೂನು ವಿದ್ಯಾರ್ಥಿಗಳು

# ಮಾನ್ವಿ ಕಾಲೇಜಿಗೆ ರನ್ನರ್‌ಅಪ್ ಗೌರವ



■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ್ದ 12ನೇ ರಾಜ್ಯ ಮಟ್ಟದ ಕನ್ನಡ ಅಣಕು ನ್ಯಾಯಾಲಯ (ಮೂಟ್ ಕೋರ್ಟ್) ಸ್ಪರ್ಧೆಯಲ್ಲಿ ಸ್ಥಳೀಯ ಕೆಎಲ್‌ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಕಾಲೇಜು ರನ್ನರ್‌ಅಪ್ ಸ್ಥಾನ ಪಡೆದು ಗಮನ ಸೆಳೆದಿದೆ.

ಸ್ಪರ್ಧೆಯಲ್ಲಿ ಕಾಲೇಜಿನ ವಿದ್ಯಾರ್ಥಿಗಳು ಅತ್ಯುತ್ತಮ ಪ್ರದರ್ಶನ ನೀಡುವ ಮೂಲಕ ದ್ವಿತೀಯ ಸ್ಥಾನ ಗಳಿಸಿದ್ದು, ಜೊತೆಗೆ ಅತ್ಯುತ್ತಮ ವಾದ ಪತ್ರ (ಬೆಸ್ಟ್ ಮೆಮೋರಿಯಲ್) ಪ್ರಶಸ್ತಿಯನ್ನೂ ತಮ್ಮದಾಗಿಸಿಕೊಂಡಿದ್ದಾರೆ.

ಕಾಲೇಜಿನ ಪ್ರಥಮ ವರ್ಷದ ವಿದ್ಯಾರ್ಥಿಗಳಾದ ಶಿವಶಂಕರ್, ರಂಜಿತಾ ಜಿ. ಹಾಗೂ ಅರುಣ್ ಸ್ಪರ್ಧೆಯಲ್ಲಿ ಭಾಗವಹಿಸಿ ಈ ಸಾಧನೆ ಮಾಡಿದ್ದಾರೆ. ಅವರ ಸಾಧನೆಗೆ ಕೆಎಲ್‌ಇ ಸಂಸ್ಥೆಯ ಅಧ್ಯಕ್ಷರು, ನಿರ್ದೇಶಕರು, ಸ್ಥಳೀಯ ಆಡಳಿತ ಮಂಡಳಿ ಹಾಗೂ ಕಾಲೇಜಿನ ಬೋಧಕ ವೃಂದ ಅಭಿನಂದನೆ ಸಲ್ಲಿಸಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆ ಕಾಲೇಜಿನ ಶೈಕ್ಷಣಿಕ ಗುಣಮಟ್ಟ ಮತ್ತು ಕಾನೂನು ಶಿಕ್ಷಣ ಕ್ಷೇತ್ರದಲ್ಲಿನ ಬದ್ಧತೆಗೆ ಸಾಕ್ಷಿಯಾಗಿದೆ ಎಂದು ಕಾಲೇಜಿನ ಪ್ರಾಚಾರ್ಯ ಡಾ. ಸಂಜೀವ್ ಎಂ. ಹುಲ್ಲೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ಉಚಿತ ಯೋಗ-ಯೋಗಾಸನ ಶಿಬಿರಕ್ಕೆ ಚಾಲನೆ

# ಒತ್ತಡ, ರೋಗಗಳಿಗೆ ಯೋಗವೇ ರಾಮಬಾಣ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ವೇಗದ ಬದುಕಿನಲ್ಲಿ ಹೆಚ್ಚುತ್ತಿರುವ ಒತ್ತಡ, ಮಧುಮೇಹ, ರಕ್ತದೊತ್ತಡ ಸೇರಿದಂತೆ ವಿವಿಧ ಜೀವನಶೈಲಿ ಕಾಯಿಲೆಗಳಿಗೆ ಯೋಗವೇ ಪರಿಣಾಮಕಾರಿ ಪರಿಹಾರ ಎಂದು ಜಿಲ್ಲಾ ಆಯುಷ್ಯ ಅಧಿಕಾರಿ ಡಾ. ಜುಬೇದಾ ತಿಗಳೇರ ಹೇಳಿದರು.

ಈಶ್ವರೀಯ ವಿಶ್ವ ವಿದ್ಯಾಲಯ ಹಾಗೂ ಆಯುಷ್ಯ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಆರಂಭಗೊಂಡ ಯೋಗ ಮತ್ತು ಯೋಗಾಸನ ಶಿಬಿರವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

"ಈಶ್ವರೀಯ ವಿಶ್ವ ವಿದ್ಯಾಲಯದ ಆವರಣಕ್ಕೆ ಕಾಲಿಟ್ಟ ಕ್ಷಣದಿಂದಲೇ ಪ್ರಶಾಂತ ವಾತಾವರಣ ಅನುಭವವಾಗುತ್ತದೆ. ಇಂತಹ ಶಾಂತ ವಾತಾವರಣದಲ್ಲಿ ಯೋಗಾಸನ, ಪ್ರಾಣಾಯಾಮ ಮತ್ತು ಧ್ಯಾನ ಅಭ್ಯಾಸ ಮಾಡುವುದರಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಯಾಗುತ್ತದೆ. ಸಮಾಜದಲ್ಲಿ ದಿನದಿಂದ ದಿನಕ್ಕೆ ಒತ್ತಡ, ಬಿಪಿ, ಶುಗರ್ ಹಾಗೂ ಇತರೆ ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿವೆ. ಇಂತಹ ಸಂದರ್ಭದಲ್ಲಿ ಯೋಗದ ಮಹತ್ವವನ್ನು ಜನರಿಗೆ ತಲುಪಿಸುವ ಕಾರ್ಯ ಅತ್ಯಂತ ಶ್ಲಾಘನೀಯ" ಎಂದು ಅವರು ಹೇಳಿದರು.

ರಾಜಯೋಗಿನಿ ಬ್ರಹ್ಮಾಕುಮಾರಿ




ಜಯಂತಿ ಅಕ್ಕ ಮಾತನಾಡಿ, ಯೋಗವು ದಿವ್ಯ ಔಷಧಿಯಂತೆ ಕಾರ್ಯನಿರ್ವಹಿಸುತ್ತದೆ. ಗದಗದ ಜನತೆ ಆರೋಗ್ಯವಂತರಾಗಿ, ಒತ್ತಡಮುಕ್ತವಾಗಿ, ಪ್ರೀತಿ, ಸ್ನೇಹ ಮತ್ತು ಸೌಹಾರ್ದತೆಯಿಂದ ಬದುಕಬೇಕು ಎಂಬ ಉದ್ದೇಶದಿಂದ ಈ ಶಿಬಿರ ಆಯೋಜಿಸಲಾಗಿದೆ ಎಂದು ಹೇಳಿದರು.

ಬಸವೇಶ್ವರ ನಗರ, ಸಿದ್ಧರಾಮೇಶ್ವರ ನಗರ ಹಾಗೂ ಬೆಟಗೇರಿ ಹೊಸಪೇಟೆ ಚೆಕ್‌ನಲ್ಲಿರುವ ಈಶ್ವರೀಯ ವಿಶ್ವ ವಿದ್ಯಾಲಯದ ಸಭಾಂಗಣದಲ್ಲಿ ಜೂನ್ 30ರವರೆಗೆ ಪ್ರತಿದಿನ ಬೆಳಿಗ್ಗೆ 6ರಿಂದ 7.30ರವರೆಗೆ ಉಚಿತವಾಗಿ ಯೋಗ ಮತ್ತು ಯೋಗಾಸನ ತರಬೇತಿ ನಡೆಯಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕರೆ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಗುತ್ತಿಗೆದಾರ ಆಂಜನೇಯ ಕಟಗಿ ಮಾತನಾಡಿ, ಸಿದ್ಧರಾಮೇಶ್ವರ ನಗರದಲ್ಲಿ ಈಶ್ವರೀಯ ವಿಶ್ವ ವಿದ್ಯಾಲಯ ನಿರಂತರವಾಗಿ ನಡೆಸುತ್ತಿರುವ ಸೇವಾ ಕಾರ್ಯಗಳಿಂದ ಸುತ್ತಮುತ್ತಲಿನ ಜನರ ಬದುಕು ಮತ್ತು ವರ್ತನೆಯಲ್ಲಿ ಗಮನಾರ್ಹ ಬದಲಾವಣೆ ಕಂಡುಬಂದಿದೆ ಎಂದು ಹೇಳಿದರು.

"ಬ್ರಹ್ಮಾಕುಮಾರಿಯರ ತ್ಯಾಗ, ತಪಸ್ಸು, ನಿಸ್ವಾರ್ಥ ಸೇವಾ ಮನೋಭಾವ ಮತ್ತು ಸದಾ ಮುಖದಲ್ಲಿರುವ ಮಂದಹಾಸ ಉತ್ತಮ ಸಮಾಜ ನಿರ್ಮಾಣಕ್ಕೆ ಪ್ರೇರಣೆಯಾಗಿದೆ. ಈ ಯೋಗ ಶಿಬಿರದಲ್ಲಿ ಮೊದಲು ನಾನು ಭಾಗವಹಿಸಿ, ಮತ್ತಷ್ಟು ಜನರನ್ನು ಭಾಗವಹಿಸುವಂತೆ ಪ್ರೇರೇಪಿಸುತ್ತೇನೆ" ಎಂದು ತಿಳಿಸಿದರು. ಇದೇ ವೇಳೆ

> "ರೋಗಮುಕ್ತ, ಒತ್ತಡಮುಕ್ತ ಸಮಾಜ ನಿರ್ಮಾಣಕ್ಕೆ ಯೋಗವೇ ದಿವ್ಯ ಮಾರ್ಗ"
> – ಡಾ. ಜುಬೇದಾ ತಿಗಳೇರ,
> ಜಿಲ್ಲಾ ಆಯುಷ್ಯ ಅಧಿಕಾರಿ

ಹಿರಿಯ ರಾಜಕಾರಣಿ ಎಚ್.ಕೆ. ಪಾಟೀಲ ಅವರನ್ನು ಸ್ಮರಿಸಿದರು.

ಆಯುಷ್ಯ ಇಲಾಖೆ ನಿಯೋಜಿಸಿದ್ದ ಪತಂಜಲಿ ಯೋಗ ಶಿಕ್ಷಣ ಸಮಿತಿಯ ಯೋಗ ಪರಿಣಿತರಾದ ನೀಲಾಂಬಿಕಾ ಚವುಡಿ ಹಾಗೂ ವಸಂತ ಹಲಗಿ ಅವರು ಆಸನ ಮತ್ತು ಪ್ರಾಣಾಯಾಮದ ಪ್ರಾತ್ಯಕ್ಷಿಕೆ ನಡೆಸಿಕೊಟ್ಟರು.

ಕಾರ್ಯಕ್ರಮವನ್ನು ಬಿ.ಕೆ. ಸಾವಿತ್ರಿ ನಿರೂಪಿಸಿದರು. ಬಿ.ಕೆ. ರೇಖಾ ವಂದಿಸಿದರು.

30 ವರ್ಷಗಳ ಬಳಿಕ ನರೇಗಲ್ಲದಲ್ಲಿ ಗುರು-ಶಿಷ್ಯರ ಅಪೂರ್ವ ಸಂಗಮ

# ಗುರುವಿನ ಪಾದಕ್ಕೆ ನಮಿಸಿದ ಶಿಷ್ಯರು!

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮೂರು ದಶಕಗಳ ಬಳಿಕ ಒಂದೇ ವೇದಿಕೆಯಲ್ಲಿ ಸೇರಿದ್ದ ಹಳೆಯ ವಿದ್ಯಾರ್ಥಿಗಳು ತಮ್ಮ ಗುರುಗಳಿಗೆ ಪಾದಪೂಜೆ ಸಲ್ಲಿಸಿ ಆಶೀರ್ವಾದ ಪಡೆದ ಅಪರೂಪದ ದೃಶ್ಯ ನರೇಗಲ್ಲದಲ್ಲಿ ಕಂಡು ಬಂತು. ಗುರುಗಳ ಮೇಲಿನ ಗೌರವ, ಹಳೆಯ ಸ್ನೇಹಿತರ ಮಿಲನ ಹಾಗೂ ಶಾಲಾ ದಿನಗಳ ಸಿಹಿ ನೆನಪುಗಳ ಸಂಭ್ರಮದಿಂದ 'ಗುರುವಂದನಾ ಮತ್ತು ಸ್ನೇಹ ಸಮ್ಮಿಲನ' ಕಾರ್ಯಕ್ರಮ ಭಾವನಾತ್ಮಕ ಕ್ಷಣಗಳಿಗೆ ಸಾಕ್ಷಿಯಾಯಿತು.

ನರೇಗಲ್ಲದ ಸರ್ಕಾರಿ ಮಾದರಿ ಕೇಂದ್ರ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ 1988–89ರಿಂದ 1995–96ರ ಬ್ಯಾಚ್‌ನ ಹಳೆಯ ವಿದ್ಯಾರ್ಥಿಗಳು ಈ ಕಾರ್ಯಕ್ರಮವನ್ನು ಆಯೋಜಿಸಿದ್ದರು.

ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ನಿವೃತ್ತ ಶಿಕ್ಷಕ ಎಂ.ಎಸ್. ಧಡೇಸೂರಮಠ, ಗುರುಗಳ ಮಹತ್ವವನ್ನು ಸ್ಮರಿಸಿ ಭಾವಪೂರ್ಣವಾಗಿ ಮಾತನಾಡಿದರು.

"ತಂದೆ-ತಾಯಿಯ ನಂತರ ಜೀವನಕ್ಕೆ ದಾರಿ ತೋರಿಸುವವರು ಗುರುಗಳು. ಗುರುವಿನ ಗುಲಾಮನಾಗುವ ತನಕ ಮುಕ್ತಿ ಸಿಗುವುದಿಲ್ಲ. ಇಂದು ನಾವು ಸಮಾಜದಲ್ಲಿ ಒಂದು ಸ್ಥಾನ ಪಡೆದಿದ್ದರೆ ಅದಕ್ಕೆ ಗುರುಗಳ ಮಾರ್ಗದರ್ಶನ, ಶಿಸ್ತು ಹಾಗೂ ಅವರು ಬಿತ್ತಿದ ಮೌಲ್ಯಗಳೇ ಕಾರಣ." ಎಂದು ಎಂ.ಎಸ್.



ಧಡೇಸೂರಮಠ ಹೇಳಿದರು.

ವಿದ್ಯಾರ್ಥಿಗಳು ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಪುಸ್ತಕಗಳು ಜ್ಞಾನವನ್ನು ವೃದ್ಧಿಸುವುದರ ಜೊತೆಗೆ ವ್ಯಕ್ತಿತ್ವ ವಿಕಸನಕ್ಕೂ ಸಹಕಾರಿಯಾಗುತ್ತವೆ ಎಂದು ಅವರು ಹೇಳಿದರು.

ಇಂದಿನ ಮೊಬೈಲ್ ಯುಗದಲ್ಲೂ ಓದುವ ಸಂಸ್ಕೃತಿ ಕಡಿಮೆಯಾಗಬಾರದು. ಪ್ರತಿಯೊಂದು ಮನೆಯಲ್ಲಿ ಪತ್ರಿಕೆ ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಪತ್ರಿಕೆ ಸಮಾಜದ ಕನ್ನಡಿಯಾಗಿದ್ದು, ದೇಶ-ವಿದೇಶದ ವಿದ್ಯಮಾನಗಳ ಜೊತೆಗೆ ಕೃಷಿ, ಆರೋಗ್ಯ ಹಾಗೂ ವಿಜ್ಞಾನದ ಮಾಹಿತಿಯನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಅಲ್ಲದೆ, ಯುವಜನತೆ ಗುಟ್ಕಾ, ತಂಬಾಕು ಸೇರಿದಂತೆ ದುಶ್ಚಟಗಳಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ನಿವೃತ್ತ ಡಿಡಿಪಿಐ ಸಂಜೀವ ಬಿಂಗೇರಿ ಮಾತನಾಡುವ ವೇಳೆ ಭಾವುಕರಾದರು.

> "ಮೂವತ್ತು ವರ್ಷಗಳ ಹಿಂದೆ ಮಾಡಿದ ಸೇವೆಯನ್ನು ವಿದ್ಯಾರ್ಥಿಗಳು ಇಂದಿಗೂ ನೆನಪಿಟ್ಟುಕೊಂಡು ಗೌರವಿಸುತ್ತಿರುವುದು ಶಿಕ್ಷಕನ ಜೀವನದ ಅತ್ಯಂತ ದೊಡ್ಡ ಸಂಪತ್ತು. ಇದಕ್ಕಿಂತ ದೊಡ್ಡ ಪ್ರಶಸ್ತಿ ಮತ್ತೊಂದಿಲ್ಲ."
> – ಸಂಜೀವ ಬಿಂಗೇರಿ, ನಿವೃತ್ತ ಡಿಡಿಪಿಐ

ಅವರ ಮಾತುಗಳಿಗೆ ಸಭಾಂಗಣ ಕರತಾಡನದಿಂದ ಮೊಳಗಿತು.

ಈ ಸಂದರ್ಭದಲ್ಲಿ ನಿವೃತ್ತ ಶಿಕ್ಷಕರಾದ ವೀರಪ್ಪ ಸಂಗನಾಳ, ಕುಸುಮವ್ವ ಭೀಮನಗೌಡ್ರ, ಶರಣಬಸಪ್ಪ ಬೂದಿಹಾಳ, ಅಂದಾನಪ್ಪ ಅಣಗೌಡ್ರ, ಎಂ.ಪಿ. ಬಸರೀಗಿಡದ, ನಿಂಗನಗೌಡ ಚಿಕ್ಕನಗೌಡ್ರ, ಬಸವನಗೌಡ ಗೌಡರ, ಗೀತಾ ಗುಜ್ಜಲ ಹಾಗೂ ಮಲ್ಲವ್ವ ಸಕ್ರೋಜಿ ಅವರನ್ನು 'ಜ್ಞಾನ ದೀಪಗಳು' ಎಂದು ಗೌರವಿಸಿ ಶಾಲು ಹೊದಿಸಿ, ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಕೃಷಿಕರಾಗಿರುವ ಹಳೆಯ ವಿದ್ಯಾರ್ಥಿಗಳು ಸಿಂಗರಿಸಿದ ಜೋಡಿ ಎತ್ತುಗಳನ್ನು ಕರೆತಂದು ಕೃಷಿ ಸಂಸ್ಕೃತಿಯ ಮಹತ್ವವನ್ನು ಬಿಂಬಿಸಿದರು. ಬಳಿಕ ಗುರುಗಳಿಗೆ ಪುಷ್ಪವೃಷ್ಟಿ ಮಾಡಿ, ಪಾದಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು. ಈ ದೃಶ್ಯ ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿತ್ತು.

ಹಳೆಯ ವಿದ್ಯಾರ್ಥಿಗಳಾದ ವಿರೂಪಾಕ್ಷಪ್ಪ ಸಂಗನಾಳ, ಹುಚ್ಚಪ್ಪ ನರೇಗಲ್ಲ, ವರುಣ ಸಂಗನಾಳ ಹಾಗೂ ಕಾಳಿದಾಸ ಬಡಿಗೇರ ಅವರು ಶಾಲಾ ದಿನಗಳ ನೆನಪುಗಳನ್ನು ಹಂಚಿಕೊಂಡು ಹಳೆಯ ದಿನಗಳನ್ನು ಮರುಕಳಿಸಿದರು.

ಹರೀಶ ಬೊಮ್ಮನಹಳ್ಳಿ ಹಾಗೂ ಗೀತಾ ಭೋಪಳಾಪೂರ ಅವರ ಸಂಗೀತ ಕಾರ್ಯಕ್ರಮಕ್ಕೆ ಮೆರುಗು ನೀಡಿತು.

ಶಿವಕುಮಾರ ಮುಳಗುಂದ ಪ್ರಾಸ್ತಾವಿಕವಾಗಿ ಮಾತನಾಡಿದರು. ವೀರಪ್ಪ ಸಂಗನಾಳ ಸ್ವಾಗತಿಸಿದರು. ಸುರೇಶ ಹಳ್ಳಿಕೇರಿ, ಗವಿಸಿದ್ದಯ್ಯ ಹಳ್ಳಿಕೇರಿ ಸೇರಿದಂತೆ ಅನೇಕ ಗಣ್ಯರು ಹಾಗೂ ಹಳೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka